# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 101 | ಶೀರ್ಷಿಕೆ ಕೋಡ್: ಕೆಏಆರ್ ಕೆಏಎನ್ 28269 | ಚಿತ್ರದುರ್ಗ | ದಿನಾಂಕ: 30–10–2023 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 01 Issue - 101 | Title- Code: KARKAN 28269 | Chitradurga | Date: 30-10-2023 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮಹರ್ಷಿ ಶ್ರೀವಾಲ್ಮೀಕಿ ಸಮುದಾಯದ ಶ್ರೇಯೋಭಿವೃದ್ಧಿಯ ಪ್ರೇರಕ ಶಕ್ತಿ: ರಘುಮೂರ್ತಿ 2

ಯುವ ಜನತೆ ವಾಲ್ಮೀಕಿ ಆದರ್ಶ ಅಳವಡಿಕೊಳ್ಳಿ: ಸಚಿವ ಡಿ.ಸುಧಾಕರ್ ಕರೆ 3

ಶ್ರೀರಾಮನನ್ನು ನೆನೆಯುವ ಮುನ್ನ ವಾಲ್ಮೀಕಿ ನೆನೆಯಿರಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಇಂದು ಇ- ಆಫೀಸ್ ಉದ್ಘಾಟನೆಗೊಳ್ಳಲಿದೆ: ಶಾಸಕ ಬಿ.ಜಿ.ಗೋವಿಂದಪ್ಪ

» **ಹೊಸದುರ್ಗ**

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಇದೇ ತಿಂಗಳ ಅ.30 ರಂದು ಹೊಸದುರ್ಗ ಪಟ್ಟಣದ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಜನತಾದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇಲಾಖೆಗಳಿಗೆ ಸಂಬಂಧಪಟ್ಟ ದೂರುಗಳನ್ನು ಲಿಖಿತವಾಗಿ ನೀಡಬಹುದು. ಇದೇ ದಿನ ತಾಲೂಕು ಕಚೇರಿಯಲ್ಲಿ ಈ – ಆಫೀಸ್ ಉದ್ಘಾಟನೆ ಮಾಡಲಾಗುವುದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜನರು ಪದೇಪದೇ ಇಲಾಖೆಗಳಿಗೆ ತಮ್ಮ ಕೆಲಸಗಳಿಗಾಗಿ ಅಲೆದಾಡಬಾರದು. ಶೀಘ್ರವೇ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಜನತಾದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಪ್ರತಿ ಇಲಾಖೆ ಸಂಬಂಧಪಟ್ಟಂತೆ ಪ್ರತ್ಯೇಕ ಕೌಂಟರ್ ತೆರೆಯಲಾಗುವುದು. ಜನರು ತಮ್ಮ ಸಮಸ್ಯೆಗಳಿರುವ ಇಲಾಖೆಗಳಿಗೆ ಅರ್ಜಿ ಸಲ್ಲಿಸಿ, ಐಪಿಜಿಆರ್ ಎಸ್ ತಂತ್ರಾಂಶದಲ್ಲಿ ದಾಖಲಿಸುವ ಮೂಲಕ ಸಮಸ್ಯೆಗಳಿಗೆ ಪರಿಹಾರ ಕೊಂಡುಕೊಳ್ಳಬಹುದಾಗಿದೆ. ಸಾರ್ವಜನಿಕರು ಈ ಕಾರ್ಯಕ್ರಮವನ್ನು ಸದ್ಬಳಕೆ ಮಾಡಿಕೊಳ್ಳಿ ಎಂದು ಮಾಹಿತಿ ನೀಡಿದರು.

**ಪ್ರತಿ ಮಂಗಳವಾರ ಗ್ರಾ.ಪಂ.ನಲ್ಲಿ ಸಭೆ;** ವಾರದ ಪ್ರತಿ ಮಂಗಳವಾರ ಜನರ ಸಮಸ್ಯೆಗಳನ್ನು ಆಲಿಸುವುದಕ್ಕಾಗಿ ತಾಲೂಕಿನ ಪ್ರತಿಯೊಂದು ಗ್ರಾಮ ಪಂಚಾಯಿತಿಯ ಕೇಂದ್ರ ಸ್ಥಾನಗಳಲ್ಲಿ ತಾಲೂಕು ಮಟ್ಟದ ಅಧಿಕಾರಿಗಳ ಸಮ್ಮುಖದಲ್ಲಿ ಜನರ ಸಮಸ್ಯೆಗಳನ್ನು ಆಲಿಸಲಾಗುವುದು. ಸಾಧ್ಯವಾದಷ್ಟು ಮಟ್ಟಿಗೆ ಸ್ಥಳದಲ್ಲಿಯೇ ಇಲಾಖೆಗಳಿಂದ ಆಗುವ ಕೆಲಸಗಳನ್ನು ಮಾಡಿಕೊಡಲಾಗುವುದು. ಜನತಾದರ್ಶನ ಕಾರ್ಯಕ್ರಮ ಮುಗಿದ ಬಳಿಕ ಗ್ರಾಮ ಪಂಚಾಯಿತಿಗೆ ಭೇಟಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತೇವೆ ಎಂದು ಮಾಹಿತಿ ನೀಡಿದರು.

### ಆರ್ಯವೈಶ್ಯ ಅಭಿವೃದ್ಧಿ ನಿಗಮದಿಂದ ವಿವಿಧ ಸಾಲ, ಸೌಲಭ್ಯಕ್ಕಾಗಿ ಅರ್ಜಿ

» **ದಾವಣಗೆರೆ**

ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ www.kacdc.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ದೂ.ಸಂ 08192–230934 ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪರು ತಿಳಿಸಿದ್ದಾರೆ.

### ಉದ್ಯಮಶೀಲ ತರಬೇತಿ

» **ದಾವಣಗೆರೆ**

ನಗರದ ಎ.ವಿ.ಕೆ ಕಾಲೇಜು ಹತ್ತಿರದ ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಸಂಗೊಳ್ಳಿ ರಾಯಣ್ಣ ಮಹಿಳಾ ಸಂಘದಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಜಿಲ್ಲೆಯ ಆಸಕ್ತ ಉದ್ಯಮಾಕಾಂಕ್ಷಿಗಳಿಗೆ ನವಂಬರ್ 15 ರಿಂದ 24 ರವರೆಗೆ ಉದ್ಯಮಶೀಲತಾಭಿವೃದ್ಧಿ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಬೆಂಗಳೂರು ಇವರ ಪ್ರಾಯೋಜಕತ್ವದಲ್ಲಿ ಸಿಡಾಕ್(ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಡ) ಸಂಸ್ಥೆಯಿಂದ ಈ ತರಬೇತಿ ಶಿಬಿರವನ್ನು ಆಯೋಜಿಸಲಾಗಿದ್ದು, ಶಿಬಿರದಲ್ಲಿ ಭಾಗವಹಿಸುವ ಅಭ್ಯರ್ಥಿಗಳು 18 ರಿಂದ 55 ವರ್ಷ ವಯೋಮಾನದವರಾಗಿರಬೇಕು. ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್ ಪ್ರತಿಯೊಂದಿಗೆ, ಜಂಟಿ ನಿರ್ದೇಶಕರ ಕಛೇರಿ, ಸಿಡಾಕ್, ಪ್ಲಾಟ್ ನಂ: 76ಎ–(ಪಿ1), ಕರೂರು ಕೈಗಾರಿಕಾ ಪ್ರದೇಶ, ಪಿ.ಬಿ. ರಸ್ತೆ, ದಾವಣಗೆರೆ. ತರಬೇತಿದಾರರಾದ ವಿನಯ ಜಿ.ಕೆ. ಮೊ.ಸಂ: 9886115200 ಹಾಗೂ ಬಸವರಾಜ ಜಿ. ಬಿ. ಮೊ.ಸಂ: 9164742033 ಸಂಪರ್ಕಿಸಲು ಆರ್.ಪಿ. ಪಾಟೀಲ್ ತಿಳಿಸಿದ್ದಾರೆ.

## ಲೋಕಸಭೆ ಎಫೆಕ್ಟ್

# 20 ಶಾಸಕರಿಗೆ ನಿಗಮ ಅಧ್ಯಕ್ಷ ಪಟ್ಟ?

» **ಬೆಂಗಳೂರು**

ಲೋಕಸಭಾ ಚುನಾವಣೆಗೆ ಉತ್ತಮ ವಾತವರಣ ನಿರ್ಮಾಣ ಮಾಡುವ ದೃಷ್ಟಿಯಿಂದ ಕಾಂಗ್ರೆಸ್ ಎಚ್ಚರಿಕೆ ಹೆಜ್ಜೆಗಳನ್ನು ಇಡುತ್ತಿದೆ. ಪ್ರದೇಶವಾರು ಪಕ್ಷ ಸಂಘಟನೆಗೆ ಅನುಕೂಲವಾಗುವಂತೆ ಸುಮಾರು 20 ಶಾಸಕರಿಗೆ ಆಯಕಟ್ಟಿನ ನಿಗಮ ಮತ್ತು ಮಂಡಳಿಗಳ ಅಧ್ಯಕ್ಷ ಸ್ಥಾನ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮೆಘ ಪ್ಲಾನ್ ಮೂಲಕ ಒಮ್ಮತ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಹೇಳಲಾಗುತ್ತಿದೆ.

ನಿಗಮ ಮಂಡಳಿಗಳ ನಾಮನಿರ್ದೇಶನಕ್ಕೆ ಸಂಬಂಧಿಸಿದಂತೆ ಇಬ್ಬರೂ ಸಹ ಎರಡ್ಮೂರು ದಿನಗಳಿಂದ ಅಳೆದು ತೂಗಿ ಚರ್ಚೆ ನಡೆಸಿದ್ದಾರೆ. ಸಚಿವ ಸ್ಥಾನದ ಆಕಾಂಕ್ಷಿಗಳಾಗಿದ್ದ 15 ರಿಂದ 20 ಶಾಸಕರಿಗೆ ಆಯಕಟ್ಟಿನ ನಿಗಮ, ಮಂಡಳಿಗಳ ಅಧ್ಯಕ್ಷ ಸ್ಥಾನ ನೀಡಿ ಸಮಾಧಾನಪಡಿಸಲು ನಿರ್ಧರಿಸಲಾಗಿದೆ. ವಾರದೊಳಗೆ ಆದೇಶವನ್ನೂ ಹೊರಡಿಸುವ ತೀರ್ಮಾನಕ್ಕೆ ಬರಲಾಗಿದೆ ಎಂದು ಮೂಲಗಳು ತಿಳಿಸಿವೆ.

ಲೋಕಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ಹೆಚ್ಚು ಅನುಕೂಲವಾಗುವಂತೆ ನಿಗಮ, ಮಂಡಳಿಗಳಲ್ಲಿ ಹೆಚ್ಚಿನ ಸ್ಥಾನಗಳನ್ನು ಪಕ್ಷದ ಮುಖಂಡರು, ಕಾರ್ಯಕರ್ತರಿಗೆ ನೀಡಬೇಕೆಂಬ ಬೇಡಿಕೆಯನ್ನು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಮುಂದಿಟ್ಟಿದ್ದರು. ಆದರೆ, ಚುನಾವಣೆ ಸಂದರ್ಭದಲ್ಲಿ ಶಾಸಕರು ಸರ್ಕಾರದ ವಿರುದ್ಧ ಅಸಮಾಧಾನ ಹೊರಹಾಕದಂತೆ ತಡೆಯಲು ಅವರಿಗೆ ಪ್ರಮುಖ ನಿಗಮ, ಮಂಡಳಿಗಳ ಅಧ್ಯಕ್ಷ ಸ್ಥಾನ ನೀಡುವುದು ಅನಿವಾರ್ಯ ಎಂದು ಸಿದ್ದರಾಮಯ್ಯ ಅವರು ಮನವೊಲಿಸಿದ್ದಾರೆ ಎಂದು ತಿಳಿದು ಬಂದಿದೆ.

**ಮೊದಲ ಹಂತದ ಸಂಭಾವ್ಯ ಶಾಸಕರ ಪಟ್ಟಿ**

| | | | |
|---|---|---|---|
| 1. ಬಸವರಾಜ ರಾಯರೆಡ್ಡಿ | ಯಲಬುರ್ಗಾ | 11. ಬಿ.ಜಿ ಗೋವಿಂದಪ್ಪ | ಹೊಸದುರ್ಗ |
| 2. ನರೇಂದ್ರಸ್ವಾಮಿ | ಮಳವಳ್ಳಿ | 12. ರಾಘವೇಂದ್ರ ಹಿಟ್ನಾಳ್ | ಕೊಪ್ಪಳ |
| 3. ಸಿ.ಎಸ್.ನಾಡಗೌಡ | ಮುದ್ದೇಬಿಹಾಳ | 13. ಪ್ರಸಾದ್ ಅಬ್ಬಯ್ಯ | ಹು–ಧಾ ಪೂರ್ವ |
| 4. ವಿನಯ್ ಕುಲಕರ್ಣಿ | ಧಾರವಾಡ | 14. ಎ.ಆರ್. ಕೃಷ್ಣಮೂರ್ತಿ | ಕೊಳ್ಳೇಗಾಲ |
| 5. ವಿಜಯಾನಂದ ಕಾಶಪ್ಪನವರ್ | ಹುನಗುಂದ | 15. ಶಿವಲಿಂಗೇಗೌಡ | ಅರಸೀಕೆರೆ |
| 6. ನಾರಾಯಣಸ್ವಾಮಿ | ಬಂಗಾರಪೇಟೆ | 16. ರೂಪ ಶಶಿಧರ್ | ಕೆಜಿಎಫ್ |
| 7. ಟಿ.ರಘುಮೂರ್ತಿ | ಚಳ್ಳಕೆರೆ | 17. ಟಿ.ಡಿ.ರಾಜೇಗೌಡ | ಶೃಂಗೇರಿ |
| 8. ಬಿ.ಕೆ.ಸಂಗಮೇಶ್ | ಭದ್ರಾವತಿ | 18. ಕೋಲಾರ ನಂಜೇಗೌಡ | ಮಾಲೂರು |
| 9. ಬಿ.ಆರ್. ಪಾಟೀಲ್ | ಆಳಂದ | 19. ಗಣೇಶ್ ಹುಕ್ಕೇರಿ | ಚಿಕ್ಕೋಡಿ |
| 10. ಎಂ.ವೈ.ಪಾಟೀಲ್ | ಅಫಜಲಪೂರ | 20. ಅನಿಲ್ ಚಿಕ್ಕಮಾದು | ಎಚ್.ಡಿ. ಕೋಟೆ |

## ಮನೆ ಮುಂದೆ ಕೆಂಪು ಹಳದಿ ಬಣ್ಣದ ರಂಗೋಲಿ ಬಿಡಿಸಿ, ಗಾಳಿಪಟ ಹಾರಿಸಿ, ಕನ್ನಡ ಜ್ಯೋತಿ ಬೆಳಗಿ

### ನ.01ರಂದು ವಿಶೇಷ ರೀತಿಯಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲು ಜಿಲ್ಲಾಧಿಕಾರಿ ದಿವ್ಯಪ್ರಭು ಮನವಿ

» **ಚಿತ್ರದುರ್ಗ**



ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷಗಳು ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಈ ವರ್ಷದ ಕನ್ನಡ ರಾಜ್ಯೋತ್ಸವವನ್ನು ವಿಶೇಷ ರೀತಿಯಲ್ಲಿ ಆಚರಿಸಲಾಗುತ್ತಿದ್ದು, ಸಾರ್ವಜನಿಕರು ಮನೆಗಳ ಮುಂದೆ ರಂಗೋಲಿ ಹಾಕಿ, ಗಾಳಿಪಟಗಳನ್ನು ಹಾರಿಸಿ, ಹಣತೆ ಹಚ್ಚುವ ಮೂಲಕ ಕನ್ನಡ ಜ್ಯೋತಿ ಬೆಳಗಿಸುವುದರೊಂದಿಗೆ ರಾಜ್ಯೋತ್ಸವ ಸಂಭ್ರಮ ಹೆಚ್ಚಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮನವಿ ಮಾಡಿದ್ದಾರೆ.

ಪುಟ 2




## ಪತ್ರಿಕಾ ಗೋಷ್ಠಿಯಲ್ಲಿ ಲಂಚಾವತಾರ ಬಿಚ್ಚಿಟ್ಟ ಶಾಸಕ ಬಿ.ಜಿ.ಗೋವಿಂದಪ್ಪ



ಜಮೀನು ಮಾಟ್‌ಗೇಜ್ ಮಾಡಲು ಆಗಿನ ಸಬ್ ರಿಜಿಸ್ಟ್ರಾರ್‌ವೊಬ್ಬರು ನಮ್ಮ ಬಳಿಯೇ 1.30 ಲಕ್ಷ ಲಂಚ ಪಡೆದಿದ್ದರು

**ಹೊಸದುರ್ಗ:** ಚುನಾವಣೆ ಪೂರ್ವದಲ್ಲಿಯೇ ಸಾಲಕ್ಕಾಗಿ ನಮ್ಮ ಅಳಿಯನ ಹೆಸರಿಗೆ ಜಮೀನು ಮಾಟ್‌ಗೇಜ್ ಮಾಡಲು ಆಗಿನ ಸಬ್ ರಿಜಿಸ್ಟ್ರಾರ್‌ವೊಬ್ಬರು ನಮ್ಮ ಬಳಿಯೇ 1.30 ಲಕ್ಷ ಲಂಚ ಪಡೆದಿದ್ದರು . ನಮ್ಮಂತವರಿಗೆ ಈ ಪರಿಸ್ಥಿತಿಯಾದರೆ ಇನ್ನು ಜನಸಾಮಾನ್ಯರ ಪಾಡೇನು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಬಹಿರಂಗವಾಗಿ ಆರೋಪಿಸಿ ಅವರು ನಾನು ಮುಂದೆ ಶಾಸಕನಾಗಬಹುದು ಎಂಬ ಪರಿಜ್ಞಾನವೇ ಅವರಿಗೆ ಇರಲಿಕ್ಕಿಲ್ಲ ಎಂದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಸುದ್ದಿಗೋಷ್ಠಿಯನ್ನುದ್ದೇಶಿ ಮಾತನಾಡಿದ ಅವರು ಈ ಲಂಚದ ಹಣದಲ್ಲಿ ಯಾರ ಪಾಲು ಎಷ್ಟಿದೆ ಎಂಬುದನ್ನು ಪತ್ತೆ ಹಚ್ಚಬೇಕಿದೆ.

ಪುಟ 4






| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |



| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |



## ಫಾಸ್ಟ್ ನ್ಯೂಸ್

### ಆರ್ಯ ವೈಶ್ಯ ನಿಗಮ: ಅರಿವು ಶೈಕ್ಷಣಿಕ ಸಾಲಕ್ಕೆ ಅರ್ಜಿ

» ಚಿತ್ರದುರ್ಗ

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನವಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ kacdc.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರಿವು ಶೈಕ್ಷಣಿಕ ಸಾಲ ಯೋಜನೆಯ ಅರ್ಹತೆಗಳು: ಸಿ.ಇ.ಟಿ, ಎನ್.ಇ.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸ್ ಹಾಗೂ ಪಿ.ಹೆಚ್.ಡಿಯಲ್ಲಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.1,00,000/-ಗಳ ಸಾಲವನ್ನು ಶೇ.2% ಬಡ್ಡಿದರದಲ್ಲಿ ಶೈಕ್ಷಣಿಕ ಸಾಲವನ್ನು ನೀಡಲಾಗುವುದು. ವ್ಯಾಸಂಗ ಪೂರ್ಣಗೊಂಡ ನಂತರ 4 ತಿಂಗಳ ವಿರಾಮಾವಧಿ ಇರುತ್ತದೆ. ನಂತರ ಸಾಲವನ್ನು 36 ವಾರ್ಷಿಕ ಕಂತುಗಳಲ್ಲಿ ಮರುಪಾವತಿಸಬೇಕು. ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದ ಒಳಗಿನವರಾಗಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.6,00,000/- ಗಳ ಮಿತಿಯೊಳಗಿರಬೇಕು.

ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಹಾಗೂ ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿಬೇಕು, ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33%, ವಿಕಲಚೇತನರಿಗೆ ಶೇ.5%, ತೃತೀಯ ಲಿಂಗಗಳಿಗೆ ಶೇ.5% ಮೀಸಲಾತಿ ಇರಿಸಿದೆ. ಒಂದು ಕುಟುಂಬದಲ್ಲಿ ಇಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ದೂರವಾಣಿ ಸಂಖ್ಯೆ 9448451111 ಹಾಗೂ ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರ ಕಛೇರಿ ವಿಳಾಸಗಳನ್ನು ಹಾಗೂ ಎಲ್ಲಾ ವಿವಿರಗಳನ್ನು kacdc.karnataka.gov.in ವೆಬ್‌ಸೈಟ್‌ನ್ನು ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಇ.ಸಂಪತ್ ಕುಮಾರ್ ತಿಳಿಸಿದ್ದಾರೆ.

### ಮನೆ ಮುಂದೆ ಕೆಂಪು ಹಳದಿ ಬಣ್ಣದ ರಂಗೋಲಿ ಬಿಡಿಸಿ, ಗಾಳಿಪಟ ಹಾರಿಸಿ, ಕನ್ನಡ ಜ್ಯೋತಿ ಬೆಳಗಿ

» ಮೊದಲ ಪುಟದಿಂದ

ಕರ್ನಾಟಕ ಸಂಭ್ರಮ-50 ರ ಅಂಗವಾಗಿ ನವೆಂಬರ್ 01 ರಂದು ಸಂಭ್ರಮದಲ್ಲಿ ಎಲ್ಲ ಸಾರ್ವಜನಿಕರೂ ತೊಡಗಿಸಿಕೊಳ್ಳಬೇಕು ಎಂಬ ಸದುದ್ದೇಶದಿಂದ ಸರ್ಕಾರ ಅಂದಿನ ದಿನದಂದು ವೈವಿಧ್ಯಮಯ ಚಟುವಟಿಕೆಗಳ ಮೂಲಕ ಕನ್ನಡ ರಾಜ್ಯೋತ್ಸವ ಆಚರಣೆ ನಡೆಯುವಂತಾಗಲು ಹಲವು ನಿರ್ದೇಶನಗಳನ್ನು ನೀಡಿದೆ. ಅದರನ್ವಯ ಈ ಬಾರಿಯ ರಾಜ್ಯೋತ್ಸವವನ್ನು ವಿಶಿಷ್ಟರೀತಿಯಲ್ಲಿ ನವೆಂಬರ್ 01 ರಂದು ಜಿಲ್ಲೆಯ ಎಲ್ಲರೂ ತಮ್ಮ ಮನೆಗಳ ಮುಂದೆ ಕೆಂಪು ಮತ್ತು ಹಳದಿ ಬಣ್ಣದ ರಂಗೋಲಿಗಳನ್ನು ಬಿಡಿಸಿ ಕರ್ನಾಟಕ ಸಂಭ್ರಮ-50 "ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ" ಎಂಬ ಘೋಷವಾಕ್ಯ ಬರೆಯುವಂತೆ ಅವರು ವಿನಂತಿಸಿದ್ದಾರೆ. ನವೆಂಬರ್ 01 ರಂದು ಬೆಳಿಗ್ಗೆ 9 ಗಂಟೆಗೆ ರಾಜ್ಯದ ಎಲ್ಲ ಆಕಾಶವಾಣಿ ಕೇಂದ್ರಗಳಿಂದ (ರೇಡಿಯೋ) ನಾಡಗೀತೆಯನ್ನು ಪ್ರಸಾರ ಮಾಡಲಾಗುವುದು. ಆ ಸಮಯದಲ್ಲಿ ಜಿಲ್ಲೆಯ ಎಲ್ಲಾ ನಾಗರಿಕರು ನಾಡಗೀತೆ ಪ್ರಸಾರವಾಗುವ ಸಂದರ್ಭದಲ್ಲಿ ಎದ್ದು ನಿಂತು ಗೌರವ ಸಲ್ಲಿಸಬೇಕು. ಅದೇ ದಿನ ಸಂಜೆ 5 ಗಂಟೆಗೆ ಜಿಲ್ಲೆಯ ಎಲ್ಲ ಗ್ರಾಮಗಳ ಮೈದಾನಗಳಲ್ಲಿ ಕೆಂಪು ಹಳದಿ ಬಣ್ಣದ ಗಾಳಿಪಟಗಳನ್ನು ಆಕಾಶಕ್ಕೆ ಹಾರಿ ಬಿಡುವ ಮೂಲಕ ಸಂಭ್ರಮದ ಗಾಳಿಪಟ ಉತ್ಸವ ಆಚರಿಸಬೇಕು. ಅದೇ ರೀತಿ ನವೆಂಬರ್ 01 ರ ಸಂಜೆ 7 ಗಂಟೆಗೆ ಜಿಲ್ಲೆಯ ಎಲ್ಲೆಡೆ ಮನೆಗಳ ಮುಂದೆ, ಕಚೇರಿಗಳು ಹಾಗೂ ಅಂಗಡಿ-ಮಳಿಗೆಗಳ ಮುಂದೆ ಹಣತೆ (ದೀಪ) ಹಚ್ಚುವ ಮೂಲಕ ಕನ್ನಡ ಜ್ಯೋತಿ ಬೆಳಗಬೇಕು. ಜಿಲ್ಲೆಯ ಎಲ್ಲ ನಾಗರಿಕರು, ಸಂಘ-ಸಂಸ್ಥೆಗಳು ರಂಗೋಲಿ, ಗಾಳಿಪಟ ಉತ್ಸವ ಹಾಗೂ ಕನ್ನಡಜ್ಯೋತಿ ಬೆಳಗುವ ಮೂಲಕ ರಾಜ್ಯೋತ್ಸವದ ಸಂಭ್ರಮದಲ್ಲಿ ಭಾಗವಹಿಸಬೇಕು

### ವ್ಯಕ್ತಿ ಕಾಣೆ

■ ಚಿತ್ರದುರ್ಗ

ತಾಲ್ಲೂಕಿನಚಿಕ್ಕಪ್ಪನಹಳ್ಳಿಗ್ರಾಮದನಿವಾಸಿತಿಪ್ಪೇಸ್ವಾಮಿ ಎಂಬ ವ್ಯಕ್ತಿ ಕಾಣೆಯಾಗಿರುವ ಪ್ರಕರಣ 2023ರ ಸೆಪ್ಟೆಂಬರ್ 14ರಂದು ತುರುವನೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ತಿಪ್ಪೇಸ್ವಾಮಿ (67ವರ್ಷ) ತಂದೆ ತಿಪ್ಪಯ್ಯ, 5.5 ಅಡಿ ಎತ್ತರ, ಕೋಲುಮುಖ, ಕಪ್ಪನೆ ಮೈಬಣ್ಣ, ದಪ್ಪನೆ ಮೈಕಟ್ಟು, ಬಿಳಿ ಮಿಶ್ರಿತ ಕಪ್ಪು ಬಣ್ಣ ತಲೆ ಕೂದಲು ಇರುತ್ತದೆ. ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಪೊಲೀಸ್ ಅಧೀಕ್ಷಕರ ದೂರವಾಣಿ ಸಂಖ್ಯೆ 08194-222781, 9480803101, ಉಪ ವಿಭಾಗ ಪೊಲೀಸ್ ಉಪಾಧೀಕ್ಷಕರ 08194-222430, ಗ್ರಾಮಾಂತರ ವೃತ್ತ ನಿರೀಕ್ಷಕರು 08194-231844, 94808083131, ಪೊಲೀಸ್ ಕಂಟ್ರೋಲ್ ರೂಂ 08194-224598, ತುರುವನೂರು ಪೊಲೀಸ್ ಠಾಣೆಯ 08194-267051, 9480803149 ಗೆ ಸಂಪರ್ಕಿಸಬೇಕು ಎಂದು ತುರುವನೂರು ಪೊಲೀಸ್ ಠಾಣೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹರ್ಷಿ ಶ್ರೀವಾಲ್ಮೀಕಿ ಸಮುದಾಯದ ಶ್ರೇಯೋಭಿವೃದ್ಧಿಯ ಪ್ರೇರಕ ಶಕ್ತಿ: ರಘುಮೂರ್ತಿ

» ಚಳ್ಳಕೆರೆ







ಮಹರ್ಷಿ ಶ್ರೀವಾಲ್ಮೀಕಿಯವರ ಆದರ್ಶಗಳು ನಾಯಕ ಸಮಾಜಕ್ಕೆ ಸದಾ ಪ್ರೇರಕ ಶಕ್ತಿಯಾಗಿವೆ. ಐದು ಸಾವಿರ ವರ್ಷಗಳ ಹಿಂದೆಯೇ ಸೌಹಾರ್ದಿತ, ಸಮಾನತೆಯ ಬದುಕನ್ನು ಪ್ರತಿಪಾದಿಸಿದ ವಾಲ್ಮೀಕಿಯವರ ಚಿಂತನೆಗಳು ನಮಗೆ ಶಕ್ತಿ ನೀಡಿವೆ. ಮುಂದಿನ ದಿನಗಳಲ್ಲಿ ರಾಜಕೀಯ ಕ್ಷೇತ್ರವೂ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ನಾಯಕ ಸಮುದಾಯ ಉತ್ತಮ ಸ್ಥಾನ ಪಡೆಯಬೇಕೆಂಬ ಸಂಕಲ್ಪ ಮಾಡೋಣವೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ನಗರದ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ, ತಾಲ್ಲೂಕು ಆಡಳಿತ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ನಗರಸಭೆ, ತಾಲ್ಲೂಕು ಪಂಚಾಯಿತಿ ಹಾಗೂ ನಾಯಕ ಸಮುದಾಯದ ವಿವಿಧ ಸಂಘಟನೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಹರ್ಷಿ ಶ್ರೀವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ನಗರದ ವಾಲ್ಮೀಕಿ ವೃತ್ತದಲ್ಲಿ ವಾಲ್ಮೀಕಿ ಪ್ರತಿಮೆಗೆ ಮಾರ್ಲಾಪಣೆ ಮಾಡುವ ಮೂಲಕ ಬೃಹತ್ ಮೆರವಣಿಗೆಗೆ ಅವರು ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ಬ್ಯಾಸಬೇಡರ ಪಡೆ, ಜಾನಪದ ಕಲಾತಂಡ, ಡೊಳ್ಳು ಕುಣಿತ, ಹಾಗೂ ಡಿಜೆ ಸೌಂಡ್‌ಗೆ ಯುವಕ, ಯುವತಿಯರು ಕುಣಿದರು. ಸಾವಿರಾರು ಸಂಖ್ಯೆಯಲ್ಲಿ ಸಮಾಜದ ಬಂಧುಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ರಾಜ್ಯದಲ್ಲಿ ಹೊಸ ಸರ್ಕಾರದ ಆಡಳಿತ ಪ್ರಾರಂಭವಾಗಿ ಐದು ತಿಂಗಳು ಕಳೆದಿದ್ದು, ಎಲ್ಲಾ ವರ್ಗಗಳಲ್ಲೂ ಸಮಾನತೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ. ರಾಜ್ಯದಲ್ಲಿ ವಾಲ್ಮೀಕಿ ಗುರುಪೀಠ ಸ್ಥಾಪನೆಗೆ ಕಾರಣಕರ್ತರಾದ ದಿವಂಗತ ಮಾಜಿ ಸಚಿವ ತಿಪ್ಪೇಸ್ವಾಮಿಯರನ್ನು ನಾವು ಸದಾ ಸ್ಮರಿಸಬೇಕು. ಚಿತ್ರದುರ್ಗದ ಬೋರಪ್ಪನಾಯಕ ವಾಲ್ಮೀಕಿ ಪ್ರಶಸ್ತಿ ಪಡೆದ ಜಿಲ್ಲೆಯ ಮೊದಲ ವ್ಯಕ್ತಿಯಾಗಿದ್ದು, ಅಂತಹ ಹಿರಿಯರ ಮಾರ್ಗದರ್ಶನ ಅಗತ್ಯವಿದೆ. ನಮ್ಮ ಜಿಲ್ಲೆಯ ನಿವೃತ್ತ ಹೈಕೋರ್ಟ್ ನ್ಯಾಯಾಧೀಶ, ಮಾಜಿ ಸಂಸದ ಎನ್.ವೈ. ಹನುಮಂತಪ್ಪ ಸಹ ಈ ಬಾರಿಯ ವಾಲ್ಮೀಕಿ ಪ್ರಶಸ್ತಿ ಪಡೆಯುವ ಮೂಲಕ ಜನಾಂಗದ ಗೌರವವನ್ನು ಹೆಚ್ಚಿಸಿದ್ದಾರೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮಹಾನ್ ತಪಸ್ವಿ ಮಹರ್ಷಿ ವಾಲ್ಮೀಕಿಯವರ ಆದರ್ಶಗಳು ಎಲ್ಲಾ ವರ್ಗದ ಜನರಿಗೆ ಪ್ರೇರಕ ಶಕ್ತಿಯಾಗಬೇಕೆಂಬ ದೃಷ್ಠಿಯಿಂದ ಈ ಕಾರ್ಯವನ್ನು ನಿರಂತರವಾಗಿ ಆಯೋಜಿಸುತ್ತಿದೆ ಎಂದರು.

ವಿಶೇಷ ಉಪನ್ಯಾಸ ನೀಡಿದ ಬಾಗಲಕೋಟೆಯ ಸಹಾಯಕ ಪ್ರಾಧ್ಯಾಪಕ ಡಾ.ಎನ್.ಟಿ.ವಿರೂಪಾಕ್ಷಿ, ಮರ, ಮರವೆಂದು ರಾಮನನ್ನೇ ಸಾಕ್ಷಾತ್ಕರಿಸಿಕೊಂಡ ಮಹರ್ಷಿ ವಾಲ್ಮೀಕಿಯವರು ಸಂಸ್ಕೃತದಲ್ಲೇ ರಾಮಾಯಣ ರಚಿಸಿದ ಶ್ರೇಷ್ಠರು. ಇಂತಹ ಮಹಾನೀಯರು ಸದಾ ಆದರ್ಶನೀಯರು ಎಂದರು. ಕಾರ್ಯಕ್ರಮ ಉದ್ದೇಶಿಸಿ ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ, ಜಂಟಿ ಕೃಷಿ ನಿರ್ದೇಶಕ ಡಿ.ಮಂಜುನಾಥ, ನಗರಸಭಾ ಸದಸ್ಯೆ ಕವಿತಾಬೋರಯ್ಯ ಮಾತನಾಡಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಮುದಾಯದ ಮುಖಂಡರು ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಮಕ್ಕಳ ತಜ್ಞ ಡಾ.ತಿಪ್ಪೇಸ್ವಾಮಿ, ಶಿಕ್ಷಣ ಕ್ಷೇತ್ರದ ತಿಪ್ಪೇಸ್ವಾಮಿ, ಡಾ.ಪಾಪಣ್ಣ, ಓಬಾನಾಯಕ, ಪಿ.ಬೋರಯ್ಯ, ಎಚ್.ಗುರುಮೂರ್ತಿ, ರಂಗಪ್ಪ, ಗುಂಡಮ್ಮನವರನ್ನು ಸನ್ಮಾನಿಲಾಯಿತು.

ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ)ನಾಯಕ ಹಾಸ್ಟಲ್ ಕಮಿಟಿ ಅಧ್ಯಕ್ಷ ಎಚ್.ಎಂ.ಮಲ್ಲಪ್ಪನಾಯಕ, ಕಾರ್ಯದರ್ಶಿ ದುಗ್ಗಾವರ ತಿಪ್ಪೇಸ್ವಾಮಿ, ಚನ್ನಂಗಿರಂಗಸ್ವಾಮಿ, ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಬಿಜೆಪಿ ಮುಖಂಡರಾದ ಬಾಳೆಮಂಡಿರಾಮದಾಸ್, ಜಯ ಪಾಲಯ್ಯ, ಡಾ.ನಾಗೇಂದ್ರನಾಯಕ, ನಗರಸಭಾ ಸದಸ್ಯ ಎಸ್.ಜಯಣ್ಣ, ವೆಂಕಟೇಶ್, ರಮೇಶ್‌ಗೌಡ, ಕೆ.ವೀರಭದ್ರಪ್ಪ, ಚಳ್ಳಕೆರೆಯಪ್ಪ, ವಿರೂಪಾಕ್ಷಿ, ಸುಮಭರಮಣ್ಣ, ಸಿ.ಶ್ರೀನಿವಾಸ್, ಸುಜಾತಪ್ರಹ್ಲಾದ್, ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಸಿ.ನಾಗರಾಜು, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಂ.ಟಿ.ಶಿವರಾಜು, ಪೌರಾಯುಕ್ತ ಸಿ.ಚಂದ್ರಪ್ಪ, ಡಿವೈಎಸ್ಪಿ ರಾಜಣ್ಣ, ವೃತ್ತ ನಿರೀಕ್ಷರಾದ ಕೆ.ಸಮೀವುಲ್ಲಾ, ಆರ್.ಎಫ್.ದೇಸಾಯಿ, ಇಒ ಶಶಿಧರ, ಮಹಿಳಾ ಸಂಘದ ಅಧ್ಯಕ್ಷೆ ಯಶೋಧಮ್ಮ, ಎಲ್ಐಸಿ ತಿಪ್ಪೇಸ್ವಾಮಿ, ಸೌಭಾಗ್ಯಮ್ಮ, ಬಿಸಿಎಂ ಅಧಿಕಾರಿ ದಿವಾಕರ, ಎಇಇ ಕಾವ್ಯ, ಪಶುವೈದ್ಯಾಧಿಕಾರಿ ರೇವಣ್ಣ, ಕೆ.ಸೂರನಾಯಕ, ಸುರೇಶ್, ಡಾ.ಡಿ.ಎನ್. ರಘುನಾಥ, ಜೆ.ರಘುವೀರನಾಯಕ, ಸಿ.ಟಿ.ಶ್ರೀನಿವಾಸ್, ಡಾ.ಲೋಕೇಶ್, ಸಿ.ಗುರುಸ್ವಾಮಿ, ಸಂದೀಪನಾಯಕ, ಪಿ.ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ಕರಡು ಮತದಾರರ ಪಟ್ಟಿ ಪ್ರಕಟ: ಹಕ್ಕು, ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

» ಚಿತ್ರದುರ್ಗ



ಭಾರತಚುನಾವಣಾಆಯೋಗದಸೂಚನೆಯಂತೆ ಜಿಲ್ಲೆಯ ವಿಧಾನಸಭಾ ಕ್ಷೇತ್ರವಾರು ಕರಡು ಮತದಾರರ ಪಟ್ಟಿಯನ್ನು ಶುಕ್ರವಾರದಂದು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಮ್ಮ ಕಚೇರಿ ಸಭಾಂಗಣದಲ್ಲಿ ಪ್ರಕಟಿಸಿದರು.

ಕರಡು ಮತದಾರರ ಪಟ್ಟಿ ಪ್ರಕಟ ಸಂಬಂಧ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆಸಿದ ಸಭೆಯಲ್ಲಿ ಕರಡು ಮತದಾರರ ಪಟ್ಟಿ ಪ್ರಕಟಿಸಿದ ಜಿಲ್ಲಾಧಿಕಾರಿಗಳು ಮಾತನಾಡಿ, ಚುನಾವಣಾ ಆಯೋಗದ ನಿರ್ದೇಶನದಂತೆ ಶುಕ್ರವಾರದಂದು ಪಟ್ಟಿ ಪ್ರಕಟಿಸಲಾಗಿದೆ,

ಇದೀಗ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವೂ ಕೂಡ ಪ್ರಾರಂಭವಾಗಿದ್ದು, ಸಾರ್ವಜನಿಕರು ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಡಿ. 09 ಕೊನೆಯ ದಿನವಾಗಿದೆ. ಮತದಾರರ ನೊಂದಣಿಗೆ ಸಂಬಂಧಿಸಿದಂತೆ ನವೆಂಬರ್ 18, 19, ಡಿಸೆಂಬರ್ 02 ಮತ್ತು 03 ರಂದು ಜಿಲ್ಲೆಯಲ್ಲಿ ವಿಶೇಷ ಕಾರ್ಯಾಚರಣೆ ಹಮ್ಮಿಕೊಂಡು, ಅರ್ಹರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲಾಗುವುದು. ಸದ್ಯ ಜಿಲ್ಲೆಯಲ್ಲಿ ಒಟ್ಟು 1661 ಮತಗಟ್ಟೆಗಳಿದ್ದು, 1401830 ಒಟ್ಟು ಮತದಾರರಿದ್ದಾರೆ. ಮತದಾರರ ಪಟ್ಟಿಗೆ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಹರಿರುವ ಎಲ್ಲರನ್ನೂ ಸೇರಿಸಲು, ವಿವಿಧ ರಾಜಕೀಯ ಪಕ್ಷಗಳು ಕೂಡ, ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮ ಕುರಿತು ವ್ಯಾಪಕ ಪ್ರಚಾರ ನೀಡಬೇಕು, ರಾಜಕೀಯ ಪಕ್ಷದವರು ಪ್ರತಿಯೊಂದು ಮತಗಟ್ಟೆಗೂ ಮತಗಟ್ಟೆ ಮಟ್ಟದ ಏಜೆಂಟರನ್ನು ನೇಮಕ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಉಪವಿಭಾಗಾಧಿಕಾರಿ ಕಾರ್ತಿಕ್, ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಪಟ್ಟಣದ ಪಟ್ಟಣ ಪಂಚಾಯಿತಿಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ





» ನಾಯಕನಹಟ್ಟಿ

ಶ್ರೀ ಶ್ರೀ ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಅತೀ ದೊಡ್ಡ ಮಹಾ ಕಾವ್ಯವಾಗಿದೆ ಎಂದು ಪಟ್ಟಣ ಪಂಚಾಯಿತಿ ಸದಸ್ಯರಾದ ಸುನೀತ ಮುದಿಯಪ್ಪ ಹೇಳಿದರು.ಪಟ್ಟಣದ ಪಟ್ಟಣ ಪಂಚಾಯಿತಿಯಲ್ಲಿ ಶ್ರೀ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಿದರು. ನಂತರ ಮಾತನಾಡಿದ ಅವರು ಈ ಮಹಾ ಕಾವ್ಯದಲ್ಲಿ ಭಾರತ ದೇಶದ ಜೀವನ ಚರಿತ್ರೆ ಅಡಗಿದೆ ಎಂದು ಅವರು ಮಾತನಾಡಿದರು. ಪಟ್ಟಣ ಪಂಚಾಯಿತಿ ಸದಸ್ಯರಾದ ಸೈಯದ್ ಅನ್ವರ್ ಮಾತನಾಡಿ ಭಾರತದ ಮೊಟ್ಟಮೊದಲು ಮಹಾ ಕಾವ್ಯ ರಾಮಾಯಣವನ್ನು ರಚಿಸಿದ ಆದಿ ಕವಿ ಮಹರ್ಷಿ ವಾಲ್ಮೀಕಿ ಎಂದರು.ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಯಾದ ಶಿವಕುಮಾರ್ ಮಾತನಾಡಿ ಪ್ರಪಂಚಕ್ಕೆ ಉನ್ನತವಾದ ಮಾನವಿಯ ಮೌಲ್ಯಗಳು ಪರಿಚಯಿಸಿದಂತಹ ಮಹಾನ್ ಮಹರ್ಷಿ ವಾಲ್ಮೀಕಿ ಅವರ ಮಾರ್ಗದರ್ಶನದಂತೆ ನಾವೆಲ್ಲರೂ ಅಳವಡಿಸಿಕೊಳ್ಳುವ ಮೂಲಕ ಉತ್ತಮವಾದ ಸಮಾಜಕ್ಕೆ ಮಾದರಿಯಾಗಲು ವಾಲ್ಮೀಕಿ ಅವರ ಕೊಡಿಗೆ ಅನನ್ಯ. ವಾಲ್ಮೀಕಿಯವರ ಮತ್ತೊಂದು ಹೆಸರು ರತ್ನಾಕರ ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಮತ್ತು ಸದಸ್ಯರು, ಸಿಬ್ಬಂದಿಗಳು ಹಾಗೂ ಇನ್ನೂ ಇತರರು ಭಾಗವಹಿಸಿದ್ದರು.

### ನಾಮ ನಿರ್ದೇಶಿತ ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

**ದಾವಣಗೆರೆ:** ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯಕ್ಕಾಗಿ ಫಲಾನುಭವಿಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲಾಗುತ್ತಿದ್ದು, ಆಯ್ಕೆ ಸಮಿತಿ ಸಭೆಯಲ್ಲಿ ಒಬ್ಬ ನಾಮನಿರ್ದೇಶಕ ಸದಸ್ಯರನ್ನು ಆಯ್ಕೆ ಮಾಡಲು ವಿಶ್ವಕರ್ಮ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಎರಡು ವರ್ಷಗಳವರೆಗೆ ಅಧಿಕಾರೇತರ ನಾಮನಿರ್ದೇಶಕ ಸದಸ್ಯರನ್ನು ನೇಮಕ ಮಾಡಿಕೊಳ್ಳಲಾಗುತ್ತಿದ್ದು, ವಿಶ್ವಕರ್ಮ ಸಮುದಾಯದ ಜನಾಂಗದವರ ಪ್ರತಿನಿಧಿತ್ವ ವಹಿಸಿ ಸಮಾಜಮುಖಿ ಕೆಲಸ ನಿರ್ವಹಿಸಿರುವ ಅಭ್ಯರ್ಥಿಗಳು ನಾಮ ನಿರ್ದೇಶಕ ಸದಸ್ಯತ್ವಕ್ಕೆ ಅರ್ಜಿ ಸಲ್ಲಿಸಬಹುದು.

## ಪ್ರಮುಖ ಸುದ್ದಿ

# ರಾಮಾಯಣದಂತಹ ಮಹಾಕಾವ್ಯ ನೀಡಿದ ವಾಲ್ಮೀಕಿ

» ನಾಯಕನಹಟ್ಟಿ



ಹಿಂದೂ ಧರ್ಮಕ್ಕೆ ರಾಮಾಯಣದಂತಹ ಮಹಾಕಾವ್ಯವನ್ನು ಕೊಡುಗೆಯಾಗಿ ನೀಡಿದವರು ಶ್ರೀ ಮಹರ್ಷಿ ವಾಲ್ಮೀಕಿ ಎಂದು ಮಾಜಿ ತಾ.ಪಂ. ಸದಸ್ಯರಾದ ಮೇಘ ಹೋಟೆಲ್ ಬಸವರಾಜ್ ಹೇಳಿದರು.

ಪಟ್ಟಣದ ಹಟ್ಟಿ ಮಲ್ಲಪ್ಪ ನಾಯಕ ಸಂಘ ಮತ್ತು ನೀರಾವರಿ ಹೋರಾಟ ಸಮಿತಿ ಸಂಘ, ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ವಿವಿಧ ಸಂಘಗಳಿಂದ ಶ್ರೀ ಶ್ರೀ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅದ್ದೂರಿಯಾಗಿ ಜರುಗಿತು.

ಮತ್ತು ಪೋಷಕರು ಉತ್ತಮ ಮತ್ತು ಗುಣಮಟ್ಟದ ಶಿಕ್ಷಣ ಕೊಡಿಸುವುದು ಪೋಷಕರ ಪ್ರಮುಖ ಮುಖ್ಯವಾಗಿದೆ. ಜಗತ್ತಿನಲ್ಲಿ ಶಿಕ್ಷಣಕ್ಕೆ ತುಂಬಾ ಮಹತ್ವವಿದೆ ಮಕ್ಕಳು ಸಮಾಜದಲ್ಲಿ ಮುಖ್ಯವಾಹಿನಿಗೆ ಬರಬೇಕಾದರೆ ಅವರಿಗೆ ಶಿಕ್ಷಣ ಕಲಿಸುವುದು ಅವಶ್ಯವಿದೆ. ಶಾಲೆಯಿಂದ ಮಕ್ಕಳನ್ನು ಬೆಳೆಸಿ ಅವರ ಭವಿಷ್ಯವನ್ನು ಹಾಳುಮಾಡಿದಂತಾಗುತ್ತದೆ ಎಂದು ಹೇಳಿದರು. ನಿಘಟಪೂರ್ವ ತಹಶೀಲ್ದಾರ್ ಎನ್.ರಘುಮೂರ್ತಿ ಮಾತನಾಡಿ ಮಹರ್ಷಿ ವಾಲ್ಮೀಕಿಯವರು ರಚಿಸಿದ ರಾಮಾಯಣವು ಸರ್ವಕಾಲಿಕವಾದದ್ದು ಅದನ್ನು ನಮ್ಮ ದೇಶಮಾತ್ರವಲ್ಲ ಜಗತ್ತಿನ ಅನೇಕ ರಾಷ್ಟ್ರಗಳು ಒಪ್ಪಿವೆ ಹಿಂದೂ ಧರ್ಮದ ಪ್ರಮುಖ ಧರ್ಮಗಳಲ್ಲಿ ಒಂದಾದ ರಾಮಾಯಣದ ಹಿಂದೂ ಮಹಾ ಕಾವ್ಯವನ್ನು ಬರೆದಿದ್ದಕ್ಕಾಗಿ ವಾಲ್ಮೀಕಿಯವರು ಪ್ರಪಂಚಕ್ಕೆ ಪ್ರಸಿದ್ದರಾಗಿದ್ದಾರೆ ಕಾವ್ಯ ಮತ್ತು ನಾಟಕ ಕಾದಂಬರಿ ಮತ್ತು ಕಥೆಗಳನ್ನು ರಚಿಸಿದ್ದಾರೆ ಎಂದು ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಶ್ರೀ ರಾಜಾಹಟ್ಟಿ ಮಲ್ಲಪ್ಪ ನಾಯಕ ಪ್ರೌಢಶಾಲೆಯಿಂದ ಪಟ್ಟಣದ ಸುತ್ತಮುತ್ತಲಿನ ರಸ್ತೆಯುದ್ದಕ್ಕೂ ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ಜನಪದ ಕಲಾ ತಂಡಗಳೊಂದಿಗೆ ನಾನಾ ಬಗೆಗಳಿಂದ ಬಂದಿದ್ದ ಬೆಳ್ಳಿರಥದಲ್ಲಿ ಶೃಂಗಾರಗೊಂಡ ವಾಲ್ಮೀಕಿ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆಯ ಮೂಲಕ ರಸ್ತೆಯುದ್ದಕ್ಕೂ ಹಾಡು ತಮಟೆ ಸದ್ದಿಗೆ ಕುಣಿದು, ಕುಪ್ಪಳಿಸಿ ಸಂಭ್ರಮ ವ್ಯಕ್ತಪಡಿಸಿದರು. ನಾಯಕನಹಟ್ಟಿಯಲ್ಲಿ ವಿವಿಧ ಜಾತಿಯ ಮುಖಂಡರು, ದಲಿತರು ಪಾಲ್ಗೊಂಡಿದ್ದರು, ವಿವಿಧ ಸಂಘಟನೆಗಳು ಬಂದಿದ್ದವು, ಡಿ.ಜೆ ಸೌಂಡ್ ನಿಂದ ಅನೇಕ ಯುವಕರು ತನ್ನ ಮನೆಯಲ್ಲಿ ಕೆಲಸವನ್ನು ಬಿಟ್ಟು ಯುವಕರು ಹದ್ದೂರಿಯಾಗಿ ಕುಣಿದು ಕುಪ್ಪಳಿಸಿದರು. ನಾಯಕನಹಟ್ಟಿ ಪಟ್ಟಣದ ಸುತ್ತಮುತ್ತಲಿನ ಶಾಂತಿ ರೀತಿಯಿಂದ ಮೆರವಣಿಗೆ ನಡೆಸಿದರು.ಈ ಸಂದರ್ಭದಲ್ಲಿ ಉಪಸ್ಥಿತರಾದ ಚಳ್ಳಕೆರೆ ಶಾಸಕ ರಘುಮೂರ್ತಿ, ಲೋಕಸಭಾ ಚುನಾವಣೆಯ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾದ ರಾಮಪ್ಪ, ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾದ ಬಾಲರಾಜ್, ಕೆ.ಪಿ.ಸಿ.ಸಿ. ಎಸ್.ಸಿ.ಮೋರ್ಚಾ ಸಂಚಾಲಕರಾದ ಹಿರೇಹಳ್ಳಿ ಮಲ್ಲೇಶ್, ಹಟ್ಟಿಮಲ್ಲಪ್ಪ ನಾಯಕ ಸಂಘದ ಅಧ್ಯಕ್ಷರಾದ ಪಟೇಲ್ ಜಿ.ಎಂ.ತಿಪ್ಪೇಸ್ವಾಮಿ (ಎತ್ತಿನಹಟ್ಟಿ ಗೌಡ್ರು) ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ಮುದಿಯಪ್ಪ, ಬೋರಸ್ವಾಮಿ, ಎಂ,ವೈ,ಟಿ,ಸ್ವಾಮಿ, ನಿಕಟಪೂರ್ವ ತಹಶೀಲ್ದಾರ್ ರಘುಮೂರ್ತಿ, ದೇವರಾಜ್ ಎತ್ತಿನಹಟ್ಟಿ, ಕೃಷಿ ಇಲಾಖೆ ಶರಣಪ್ಪ, ಮಾಜಿ ಪ.ಪಂ. ಸದಸ್ಯ ಬಸಣ್ಣ, ಮಾಜಿ ಪ.ಪಂ. ಅಧ್ಯಕ್ಷರು ಹಾಲಿ ಸದಸ್ಯರಾದ ಎನ್. ಮಹಂತಣ್ಣ, ಜಾಗನೂರಹಟ್ಟಿ ಪ.ಪಂ. ಸದಸ್ಯರಾದ ದುರುಗಪ್ಪ, ಜಿ.ವೈ.ತಿಪ್ಪೇಸ್ವಾಮಿ, ಜೆ.ಡಿ.ಎಸ್. ಮುಖಂಡ ಬದ್ರಿ, ಬಂಡೆ ಕೊಪಲೆ ಓಬಣ್ಣ, ಕುಧಾಪುರ ಉಮೇಶ್, ಎನ್.ಪಿ. ಮುತ್ತಯ್ಯ, ಓಬಣ್ಣನಾಯಕ, ಪಾಲಯ್ಯ, ಶಿಕ್ಷಕರಾದ ರಾಜಯ್ಯ, ಪಟ್ಟಣ ಪಂಚಾಯಿತಿ ಸದಸ್ಯರಾದ ಸೈಯದ್ ಅನ್ವರ್, ಪ್ರಭುಸ್ವಾಮಿ, ಕೆ.ಟಿ. ನಾಗರಾಜ, ಬಿಲ್‌ಕಲೆಕ್ಟರ್ ತಿಪ್ಪೇಸ್ವಾಮಿ, ನಲಗೇತನಹಟ್ಟಿ ಗ್ರಾ.ಪಂ. ಸದಸ್ಯರಾದ ಸ್ವಾಮಿ, ರಾಮಸಾಗರ ಕಾಟಯ್ಯ, ಕೋಲಮ್ಮನಹಳ್ಳಿ ಆರ್. ಬಸವರಾಜ್, ಕರಿಬಸಪ್ಪ, ಹಾಗೂ ನಾಯಕ ಸಮುದಾಯದವರು, ಮಹಿಳೆಯರು, ಪೊಲೀಸ್ ಇಲಾಖೆಯವರು ಇದ್ದರು.

## ಫಾಸ್ಟ್ ನ್ಯೂಸ್

### ಅರ್ಹ ನೋದಾಯಿತ ಸಂಘ, ಸಂಸ್ಥೆಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ವಲಯ ಕಚೇರಿ ವತಿಯಿಂದ ಬಂಜಾರ ಸಾಂಪ್ರದಾಯಿಕ ಕಸೂತಿ ಮತ್ತು ಪೂರಕ ಹೊಲಿಗೆ ತರಬೇತಿ ಕೈಗೊಳ್ಳಲು ನುರಿತ ಅರ್ಹ ನೋದಾಯಿತ ಸಂಘ, ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಮತ್ತು ಅರ್ಹ ಸಂಘ, ಸಂಸ್ಥೆಗಳು ನವಂಬರ್ 4 ರೊಳಗಾಗಿ ದಾವಣಗೆರೆ ವಲಯ ಕಚೇರಿಗೆ ಭೇಟಿ ನೀಡಿ ನಿಗಮದ ನಿಗಧಿತ ಅರ್ಜಿ ನಮೂನೆ ಪಡೆದು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ವಲಯ ಕಚೇರಿಯನ್ನು ಸಂಪರ್ಕಿಸಲು ನಿಗಮದ ದಾವಣಗೆರೆ ವಲಯ ಕಚೇರಿ ಅಭಿವೃದ್ಧಿ ಅಧಿಕಾರಿ ತಿಳಿಸಿದ್ದಾರೆ.

### ಕೋಟ್ಯಾಂತರ ಅಭಿಮಾನಿಗಳ ಹೃದಯದಲ್ಲಿ ಪುನಿತ್ ಚಿರಸ್ಥಾಯಿ: ರಮೇಶ್‌ಕುಮಾರ್



» ಚಳ್ಳಕೆರೆ

ಕನ್ನಡ ಚಿತ್ರರಂಗದ ಇತಿಹಾಸದಲ್ಲಿ ತಮ್ಮದೇಯಾದ ಅಭೂತಪೂರ್ವ ಪಾತ್ರಗಳ ಮೂಲಕ ಕೋಟ್ಯಾಂತರ ಅಭಿಮಾನಿಗಳ ಆರಾಧ್ಯದೈವವಾಗಿದ್ದ ನಾಡಿನಾದ್ಯಂತ ಪವರ್ ಸ್ಟಾರ್ ಹೆಸರಿನಿಂದ ಕಳಗೊಳಿಸುತ್ತಿದ್ದ ಯುವ ನಟ, ಉದಯೋನ್ಮುಖ ಪ್ರತಿಭೆ, ಕರ್ನಾಟಕ ರತ್ನ ದಿವಂಗತ ಪುನಿತ್ ರಾಜ್‌ಕುಮಾರ್ ಕನ್ನಡಿಗರ ಮನಸ್ಸಿನಲ್ಲಿ ಸದಾ ಚಿರಸ್ಥಾಯಿಯಾಗಿ ಉಳಿಯುತ್ತಾರೆಂದು ಹಿರಿಯೂರು ಐಟಿಐ ಕಾಲೇಜು ಪ್ರಾಂಶುಪಾಲ ರಮೇಶ್‌ಕುಮಾರ್ ತಿಳಿಸಿದರು. ಅವರು, ಭಾನುವಾರ ನಗರದ ಬೆಂಗಳೂರು ರಸ್ತೆಯಲ್ಲಿರುವ ಬನಶ್ರೀ ವೃದ್ಧಾಶ್ರಮದಲ್ಲಿ ಪುನಿತ್ ರಾಜಕುಮಾರ್ ಅಭಿಮಾನಿ ಬಳಗ ಹಾಗೂ ಮುತ್ತುರಾಜ್ ಕಲಾ ಬಳಗ ಏರ್ಪಡಿಸಿದ್ದ ಪುನಿತ್‌ರಾಜಕುಮಾರ್‌ರವರ ಎರಡನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಆಶ್ರಮದ ವೃದ್ಧರಿಗೆ ಹಾಲು, ಹಣ್ಣು, ಬ್ರೆಡ್ ಹಂಚಿ ಪುಣ್ಯಸ್ಮರಣೆಯನ್ನು ಸರಳವಾಗಿ ಆಚರಣೆ ಮಾಡಲಾಯಿತು. ಮುತ್ತುರಾಜ್ ಕಲಾಬಳಗದ ಅಧ್ಯಕ್ಷ, ಗಾಯಕ ಕೆ.ಟಿ.ಮುತ್ತುರಾಜ್, ನವೀನ್‌ಕುಮಾರ್, ಜಿಲ್ಲಾ ದಲಿತ ಸಂಘರ್ಷ ಸಮಿತಿ ಅಧ್ಯಕ್ಷ ಹೆಗ್ಗೆರೆ ಮಂಜುನಾಥ, ರುದ್ರಮುನಿ, ಜೋಗಿ, ವೃದ್ಧಾಶ್ರಮದ ವ್ಯವಸ್ಥಾಪಕಿ ಮಂಜುಳಮ್ಮ ಮುಂತಾದವರು ಉಪಸ್ಥಿತರಿದ್ದರು.

### ಪತ್ರಿಕಾ ಕ್ಷೇತ್ರದ ಮೌಲ್ಯ ಸಂರಕ್ಷಿಸುವ ಕಾರ್ಯ ನಿರಂತರ ನಡೆಯಲಿ: ಚನ್ನಕೇಶವಮೂರ್ತಿ



» ಚಳ್ಳಕೆರೆ

ಸಮಾಜದ ಹಲವಾರು ಸೇವಾ ಕಾರ್ಯಗಳಲ್ಲಿ ನಿರಂತರ ತೊಡಗಿಕೊಳ್ಳುವ ಮೂಲಕ ಜನರ ವಿಶ್ವಾಸವನ್ನು ಗಳಿಸಿದ ನಗರದ ಹಿರಿಯ ಪತ್ರಕರ್ತ ಚನ್ನಕೇಶಮೂರ್ತಿಯವರನ್ನು ನನ್ನಿವಾಳದ ಶಾತವಾಹನ ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿ ನಡೆದ ಬುದ್ದ ಬೆಳಕು ಕಾರ್ಯಕ್ರಮದಲ್ಲಿ ಅಭಿನಂದಿಸಲಾಯಿತು. ಗೌರವಾಧ್ಯಕ್ಷ ಆರ್. ದ್ಯಾಮರಾಜ್ ಮಾತನಾಡಿ, ಬುದ್ದ ಬೆಳಕು ಕಾರ್ಯಕ್ರಮ ಯೋಜನೆಯಲ್ಲಿ ಹಲವಾರು ಸಮಾಜ ಚಿಂತಕರನ್ನು ಗೌರವಿಸಲಾಗುತ್ತಿದೆ. ಹಿರಿಯ ಪತ್ರಕರ್ತ ಚನ್ನಕೇಶವಮೂರ್ತಿ ಸಹ ಸಮಾಜದಲ್ಲಿ ಹಲವಾರು ಕಾರ್ಯಕ್ರಮಗಳ ಮೂಲಕ ಶೋಷಿತ ಸಮುದಾಯಕ್ಕೆ ಬೆಳಕು ನೀಡಿದ್ದಾರೆಂದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಹಿರಿಯ ಪತ್ರಕರ್ತ ಚನ್ನಕೇಶವಮೂರ್ತಿ, ಯಾವುದೇ ಆಸೆ, ಆಕಾಂಕ್ಷೆಗಳಿಲ್ಲದೆ, ಪತ್ರಿಕಾ ವೃತ್ತಿಯನ್ನು ಗೌರವಿಸುವತ್ತ ಎಲ್ಲಾ ಪತ್ರಕರ್ತರು ಗಮನ ನೀಡಬೇಕು. ಸಮಾಜವನ್ನು ತಿದ್ದುವ, ಅನ್ಯಾಯವನ್ನು ಎದುರಿಸುವ ಕಾರ್ಯ ಪತ್ರಿಕಾ ಕ್ಷೇತ್ರದಿಂದ ಮಾತ್ರ ಸಾಧ್ಯವಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಅಧ್ಯಕ್ಷ ಕೃಷ್ಣಮೂರ್ತಿ, ಹಿರಿಯ ಪತ್ರಕರ್ತ ಡಿ.ವೀರಣ್ಣ, ಜಾಲಿಮಂಜುನಾಥ, ತಿಪ್ಪೇರುದ್ರಪ್ಪ, ಮಾರಣ್ಣ, ರಂಗಸ್ವಾಮಿ, ಕಾರ್ಯದರ್ಶಿ ಡಿ.ಮಂಜುನಾಥ, ರವಿ, ಕೇಶವಮೂರ್ತಿ, ಚಂದ್ರು, ಶಿವಮೂರ್ತಿ, ಮಲ್ಲಿಕಾರ್ಜುನ್ ಮುಂತಾದವರು ಉಪಸ್ಥಿತರಿದ್ದರು.

---

ಐವರಿಗೆ ಜಿಲ್ಲಾ ವಾಲ್ಮೀಕಿ ಪ್ರಶಸ್ತಿ ಪುರಸ್ಕಾರ– ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕರೆ

# ಯುವ ಜನತೆ ವಾಲ್ಮೀಕಿ ಆದರ್ಶ ಅಳವಡಿಕೊಳ್ಳಿ





» ಚಿತ್ರದುರ್ಗ

ಮಹರ್ಷಿ ವಾಲ್ಮೀಕಿ ರಾಮಾಯಣ ಮಹಾಕಾವ್ಯದ ಮೂಲಕ ಸಾದರ ಪಡಿಸಿದ ಆದರ್ಶಗಳನ್ನು ಇಂದಿನ ಯುವ ಜನತೆ ಜೀವನದಲ್ಲಿ ಅಳವಡಿಕೊಳ್ಳಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕರೆ ನೀಡಿದರು.

ನಗರದ ತರಾಸು ರಂಗಮಂದಿರದಲ್ಲಿ ಶನಿವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಾಯದಲ್ಲಿ ಆಯೋಜಿಸಲಾದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪ ನಮನ ಸಮರ್ಪಿಸಿ ಅವರು ಮಾತನಾಡಿದರು.

ವಾಲ್ಮೀಕಿ ಕುರಿತು ಹೆಚ್ಚು ಅಧ್ಯಯನ ಮಾಡಿ ಬೆಳಕು ಚೆಲ್ಲುವ ಅಗತ್ಯವಿದೆ. ಪ್ರತಿಯೊಬ್ಬರು ವಾಲ್ಮೀಕಿ ಬೋಧಿಸಿದ ಉಪದೇಶಗಳನ್ನು ಪರಿಪಾಲಿಸಿದರೆ ಕುಟುಂಬ ಹಾಗೂ ಸಮಾಜದಲ್ಲಿ ಶಾಂತಿ ನೆಲೆಸುತ್ತದೆ. ಚಿತ್ರದುರ್ಗ ಜಿಲ್ಲೆಯಲ್ಲಿ ವಾಲ್ಮೀಕಿ ಸಮುದಾಯಕ್ಕೆ ಸೇರಿದ ಜನರ ಸಂಖ್ಯೆ ಹೆಚ್ಚಿದೆ. ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ಆರ್ಥಿಕವಾಗಿ ವಾಲ್ಮೀಕಿ ಸಮುದಾಯ ಹೆಚ್ಚು ಅಭಿವೃದ್ಧಿ ಹೊಂದಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಕವಿಗಳಿಗೆ ಕವಿ ಮಹರ್ಷಿ ವಾಲ್ಮೀಕಿ, ಸಾಧರಣ ಬೇಡನಾಗಿದ್ದ ವಾಲ್ಮೀಕಿ ನಾರದ ಮುನಿಗಳ ಭೇಟಿಯಿಂದ ಕವಿಯಾಗಿ ಬದಲಾವಣೆ ಹೊಂದಿದರು ಎಂಬ ವಿಷಯ ಪುರಾಣಗಳಿಂದ ತಿಳಿದು ಬರುತ್ತದೆ.

ಪ್ರತಿಯೊಬ್ಬ ವ್ಯಕ್ತಿಯು ತನ್ನ ಹಿಂದಿನ ಜೀವನವನ್ನು ಬದಲಾಯಿಸಿ, ಒಳ್ಳೆಯ ಆದರ್ಶಗಳನ್ನು ಮೈಗೂಡಿಸಿಕೊಂಡು ಮುಂದಿನ ಜೀವನ ನಡೆಸಬಹುದು ಎಂಬುದು ಇದರಿಂದ ತಿಳಿದು ಬರುತ್ತದೆ. ಚಿತ್ರದುರ್ಗ ನಗರದಲ್ಲಿ ವಾಲ್ಮೀಕಿ ಭವನ ನಿರ್ಮಾಣದ ಕಾರ್ಯ ಶೇ.80 ರಷ್ಟು ಪೂರ್ಣಗೊಂಡಿದೆ. ಶೀಘ್ರವೇ ಕಾಮಗಾರಿಯನ್ನು ಪೂರ್ಣಗೊಳಿಸಿ ಭವನದ ಉದ್ಘಾಟನೆ ನೆರವೇರಿಸಲಾಗುವುದು. ಚಳ್ಳಕೆರೆ ವೃತ್ತವನ್ನು ವಾಲ್ಮೀಕಿ ವೃತ್ತವನ್ನಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಪ್ರಸ್ತಾವಿಕವಾಗಿ ಮಾತನಾಡಿ, ಆದಿಕವಿ ಮಹರ್ಷಿ ವಾಲ್ಮೀಕಿ ಬರದ ರಾಮಾಯಣ ಭಾರತ ದೇಶದಲ್ಲಿ ಮಾತ್ರವಲ್ಲದೇ, ಇಂಡೋನೇಷ್ಯಾ ಸೇರಿದಂತೆ ಆಗ್ನೇಯ ಏಷ್ಯಾ ರಾಷ್ಟಗಳಲ್ಲಿ ಕೂಡ ಪ್ರಸಿದ್ಧಿ ಪಡೆದಿದೆ. ಮನಃಪರಿವರ್ತನೆ ಹೊಂದಿ ಮಾನವ ಜನಾಂಗದ ಕಲ್ಯಾಣಕ್ಕಾಗಿ ವಾಲ್ಮೀಕಿ ಸಂಸ್ಕೃತದಲ್ಲಿ ರಾಮಾಯಣ ಮಹಾಕಾವ್ಯ ರಚಿಸಿದರು. ಭಾರತದ ಎಲ್ಲಾ ಭಾಷೆಗಳಲ್ಲಿಯೂ ರಾಮಾಯಣವನ್ನು ಹಲವು ಕವಿಗಳು ಪುನರ್ ರಚಿಸಿದ್ದಾರೆ. ಜೀವನ ಪರಿವರ್ತನೆಗೆ ರಾಮಾಯಣ ಮಹಾಕಾವ್ಯ ಸ್ಪೂರ್ತಿಯಾಗಿದೆ. ಭಗವಂತ ವಿಷ್ಣು ರಾಮನ ಅವತಾರದಲ್ಲಿ ಸಂಪೂರ್ಣವಾಗಿ ಮಾನವ ಜೀವನವನ್ನು ನಡೆಸಿ ಸಾಕಷ್ಟು ಕಷ್ಟಗಳನ್ನು ಅನುಭವಿಸಿದರು. ದುರಾಸೆ ಹೇಗೆ ಮಾನವನಿಗೆ ಸಂಕಷ್ಟ ತಂದು ಒಡ್ಡುತ್ತದೆ ಎಂಬುದನ್ನು ವಾಲ್ಮೀಕಿ ರಾಮಾಯಣ ಮಹಾಕಾವ್ಯದಲ್ಲಿ ಚಿತ್ರಿಸಿದ್ದಾರೆ ಎಂದು ಹೇಳಿದರು.

**ಐವರಿಗೆ ಜಿಲ್ಲಾ ವಾಲ್ಮೀಕಿ ಪ್ರಶಸ್ತಿ ಪುರಸ್ಕಾರ:** ಇತಿಹಾಸ ಸಂಶೋಧಕ ಡಾ.ಮಾಲತೇಶ್, ಚಿತ್ರಕಲಾವಿದ ಟಿ.ಎನ್.ವೀರೇಶ್, ಪತ್ರಕರ್ತ ಎಂ.ಎನ್.ಅಹೋಬಲಪತಿ, ಯುವ ಉದ್ಯಮಿ ಅರುಣಕುಮಾರ್ ಹಾಗೂ ನಿವೃತ್ತ ಇಂಜಿನಿಯರ್ ರುದ್ರಪ್ಪ ಅವರಿಗೆ ಕಾರ್ಯಕ್ರಮದಲ್ಲಿ ಸನ್ಮಾಸಿ ಜಿಲ್ಲಾ ವಾಲ್ಮೀಕಿ ಪ್ರಶಸ್ತಿ ಪುರಸ್ಕಾರ ನೀಡಲಾಯಿತು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಜಿಲ್ಲೆಯಲ್ಲಿ ಅತ್ಯುನ್ನತ ಸ್ಥಾನ ಪಡೆದ ಕುಮಾರಿ ಸಿ.ಬಿ.ಭವ್ಯಾ ಅವರಿಗೆ 1 ಲಕ್ಷ ಪ್ರೋತ್ಸಾಹದ ಚಕ್ ನೀಡಿ ಸನ್ಮಾನಿಸಲಾಯಿತು. ಹಿರಿಯೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕ ಡಾ. ಎಸ್. ಮಾರುತಿ ಮಹರ್ಷಿ ವಾಲ್ಮೀಕಿ ಕುರಿತು ಉಪನ್ಯಾಸ ನೀಡಿದರು.ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೆಚ್.ಜೆ.ಕುಮಾರಸ್ವಾಮಿ, ಉಪವಿಭಾಗಧಿಕಾರಿ ಆರ್.ಕಾರ್ತಿಕ್, ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ತಾಲ್ಲೂಕು ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಬಿ. ಕಾಂತರಾಜ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಓ.ಪರಮೇಶ್ವರಪ್ಪ, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗದದ ಜಿಲ್ಲಾ ವ್ಯವಸ್ಥಾಪಕಿ ಟಿ.ಎಸ್.ಮಂಜುಳ, ನಗರ ಸಭೆ ಆಯುಕ್ತೆ ರೇಣುಕಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

**ಅದ್ದೂರಿ ವಾಲ್ಮೀಕಿ ಭಾವಚಿತ್ರ ಹಾಗೂ ಪುತ್ಥಳಿ ಮೆರವಣಿಗೆ:** ಚಿತ್ರದುರ್ಗ(ಕರ್ನಾಟಕ ವಾರ್ತೆ).ಅ.28: ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಾಲ್ಮೀಕಿ ಭಾವಚಿತ್ರ ಹಾಗೂ ಪುತ್ಥಳಿ ಮೆರವಣಿಗೆಗೆ ಶನಿವಾರ ಕೋಟೆ ಮುಂಭಾಗದಲ್ಲಿ ಚಾಲನೆ ನೀಡಲಾಯಿತು. ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್. ಜೆ ಹಾಗೂ ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್ ವಾಲ್ಮೀಕಿ ಪುತ್ಥಳಿಗೆ ಪುಷ್ಪಾರ್ಪಣೆ ಮಾಡುವುದರ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ಕೋಟೆ ಮುಂಭಾಗದಿಂದ ಆರಂಭವಾದ ಮೆರವಣಿಗೆ, ಏಕನಾಥೇಶ್ವರ ಹಾಗೂ ಹುಚ್ಚಂಗಿಯಲ್ಲಮ್ಮ ದೇವಸ್ಥಾನ ಮುಂಭಾಗದಿಂದ, ಆನೆ ಬಾಗಿಲು, ಗಾಂಧಿ ವೃತ್ತ, ಎಸ್.ಬಿ.ಐ ವೃತ್ತ, ಅಂಬೇಡ್ಕರ್ ವೃತ್ತ ಹಾಗೂ ಮದಕರಿ ನಾಯಕ ವೃತ್ತದವರೆಗೆ ಸಾಗಿತು. ಖಾಸ ಬೇಡರ ಪಡೆ, ಕಹಳೆ ವಾದನ, ಡೋಲು, ತಪ್ಪಡೆ, ಕರಡಿ ಮಜಲು, ಕೀಲು ಕುದುರೆ, ಗೊಂಬೆ ಕುಣಿತ, ಪಟ ಕುಣಿತ ಮೆರವಣಿಗೆಗೆ ಸಾಂಸ್ಕೃತಿಕ ರಂಗನ್ನು ತುಂಬಿದವು.

ಈ ಸಂದರ್ಭದಲ್ಲಿ ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಹೆಚ್. ಜೆ.ಕೃಷ್ಣಮೂರ್ತಿ, ತಾಲ್ಲೂಕು ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಬಿ. ಕಾಂತರಾಜ್, ಮದಕರಿ ನಾಯಕ ವಿದ್ಯಾಸಂಸ್ಥೆಯ ಸಂದೀಪ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್, ಆಹಾರ ಇಲಾಖೆಜಂಟಿನಿರ್ದೇಶಕಮಧುಸೂದನ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಓ.ಪರಮೇಶ್ವರಪ್ಪ, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗದದ ಜಿಲ್ಲಾ ವ್ಯವಸ್ಥಾಪಕಿ ಟಿ.ಎಸ್.ಮಂಜುಳ, ನಗರ ಸಭೆ ಆಯುಕ್ತೆ ರೇಣುಕಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.





## ಅದ್ದೂರಿ ವಾಲ್ಮೀಕಿ ಭಾವಚಿತ್ರ, ಪುತ್ಥಳಿ ಮೆರವಣಿಗೆ

**ಚಿತ್ರದುರ್ಗ:** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ



ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಾಲ್ಮೀಕಿ ಭಾವಚಿತ್ರ ಹಾಗೂ ಪುತ್ಥಳಿ ಮೆರವಣಿಗೆಗೆ ಶನಿವಾರ ಕೋಟೆ ಮುಂಭಾಗದಲ್ಲಿ ಚಾಲನೆ ನೀಡಲಾಯಿತು. ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್. ಜೆ ಹಾಗೂ ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್ ವಾಲ್ಮೀಕಿ ಪುತ್ಥಳಿಗೆ ಪುಷ್ಪಾರ್ಪಣೆ ಮಾಡುವುದರ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ಕೋಟೆ ಮುಂಭಾಗದಿಂದ ಆರಂಭವಾದ ಮೆರವಣಿಗೆ, ಏಕನಾಥೇಶ್ವರ ಹಾಗೂ ಹುಚ್ಚಂಗಿಯಲ್ಲಮ್ಮ ದೇವಸ್ಥಾನ ಮುಂಭಾಗದಿಂದ, ಆನೆ ಬಾಗಿಲು, ಗಾಂಧಿ ವೃತ್ತ, ಎಸ್.ಬಿ.ಐ ವೃತ್ತ, ಅಂಬೇಡ್ಕರ್ ವೃತ್ತ ಹಾಗೂ ಮದಕರಿ ನಾಯಕ ವೃತ್ತದವರೆಗೆ ಸಾಗಿತು. ಖಾಸ ಬೇಡರ ಪಡೆ, ಕಹಳೆ ವಾದನ, ಡೋಲು, ತಪ್ಪಡೆ, ಕರಡಿ ಮಜಲು, ಕೀಲು ಕುದುರೆ, ಗೊಂಬೆ ಕುಣಿತ, ಪಟ ಕುಣಿತ ಮೆರವಣಿಗೆಗೆ ಸಾಂಸ್ಕೃತಿಕ ರಂಗನ್ನು ತುಂಬಿದವು. ಈ ಸಂದರ್ಭದಲ್ಲಿ ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ತಾಲ್ಲೂಕು ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷ ಬಿ. ಕಾಂತರಾಜ್, ಮದಕರಿ ನಾಯಕ ವಿದ್ಯಾಸಂಸ್ಥೆಯ ಸಂದೀಪ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಓ.ಪರಮೇಶ್ವರಪ್ಪ, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗದದ ಜಿಲ್ಲಾ ವ್ಯವಸ್ಥಾಪಕಿ ಟಿ.ಎಸ್.ಮಂಜುಳ, ನಗರ ಸಭೆ ಆಯುಕ್ತೆ ರೇಣುಕಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ನಸಿರ್‌ಂಗ್,ಬಿಎಡ್,ಪದವಿ,ಪಿಯು ಸೇರಿದಂತೆ ಸಾವಿರಾರು ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

---

## ಪ್ರಮುಖ ಸುದ್ದಿ

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ವಾಲ್ಮೀಕಿ ಜಯಂತಿ

# ವಾಲ್ಮೀಕಿ ಭಾವಚಿತ್ರಕ್ಕೆ ಶಾಸಕ ಡಾ.ಎಂ.ಚಂದ್ರಪ್ಪ ಪುಷ್ಪಾರ್ಚನೆ

» ಹೊಳಲ್ಕೆರೆ

ಗುಡ್ಡಗಾಡು ಪ್ರದೇಶದಲ್ಲಿ ಜೀವಿಸಿ ಪ್ರಪಂಚಕ್ಕೆ ಮಾದರಿಯಾದಂತಹ ಪವಿತ್ರ ಗ್ರಂಥ ರಾಮಾಯಣವನ್ನು ಕೊಡುಗೆಯಾಗಿ ನೀಡಿರುವ ಮಹರ್ಷಿ ವಾಲ್ಮೀಕಿಯನ್ನು ಪ್ರತಿಯೊಬ್ಬರು ಸ್ಮರಿಸಿಕೊಳ್ಳಬೇಕೆಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ರಾವಣಾಸುರನ ಮೇಲೆ ಶ್ರೀರಾಮಚಂದ್ರ ಯುದ್ದ ಸಾರಿದಾಗ ಕಂಕಣ ಕಟ್ಟುವಂತೆ ವೈರಿ ರಾವಣಾಸುರನಿಗೆ ಆಹ್ವಾನ ನೀಡಿದಾಗ ಬ್ರಾಹ್ಮಣ ವೇಷದಲ್ಲಿ ಬಂದು ರಾವಣಾಸುರ ಶ್ರೀರಾಮಚಂದ್ರನಿಗೆ ಕಂಕಣ ಕಟ್ಟಿ ಯುದ್ದದಲ್ಲಿ ಜಯಶಾಲಿಯಾಗುವಂತೆ ಹಾರೈಸಿ ಹಿಂದಿರುಗಿ ಯುದ್ದಕ್ಕೆ ಸಿದ್ದನಾಗುತ್ತಾನೆ ಎಂದು ಸ್ಮರಿಸಿಕೊಂಡರು

ಪರಾಕ್ರಮಿ ರಾವಣಾಸುರನನ್ನು ಕೊಂದ ಪಾಪವನ್ನು ಪರಿಹರಿಸಿಕೊಳ್ಳುವುದಕ್ಕಾಗಿ ಶ್ರೀರಾಮಚಂದ್ರ ರಾಮೇಶ್ವರದಲ್ಲಿ ಸಮುದ್ರದ ಪಕ್ಕ 21 ಬಾವಿಗಳನ್ನು ತೋಡಿಸಿ ಶಿವನನ್ನು ಪ್ರತಿಷ್ಠಾಪಿಸಿ 21 ಬಾವಿಗಳ



ನೀರುತಂದು ಅಭಿಷೇಕ ಮಾಡುತ್ತಾನೆ. ದೇಶದ ಪ್ರಧಾನಿ ನರೇಂದ್ರ ಮೋದಿ ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ನಿರ್ಮಾಣಕ್ಕೆ ಚಾಲನೆ ನೀಡಿದ್ದಾರೆ. ಅದೇ ರೀತಿ ವಾಲ್ಮೀಕಿ ಮಂದಿರವನ್ನು ಸ್ಥಾಪನೆ ಮಾಡಿದರೆ ಒಳ್ಳೆಯದು ಎಂದು ನನ್ನ ಮನಸು ಹೇಳುತ್ತದೆ. ನಾಯಕ ಸಮಾಜ ಭಕ್ತಿ, ಪರಾಕ್ರಮ, ಪ್ರೀತಿ ವಿಶ್ವಾಸಕ್ಕೆ ಹೆಸರಾದವು. ನಾಯಕ ಸಮಾಜಕ್ಕೆ ಶೇ. 3ರಷ್ಟಿದ್ದ ಮೀಸಲಾತಿಯನ್ನು ಬಸವರಾಜ್ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದಾಗ ಶೇ. 7.5ಕ್ಕೆ ಏರಿಸಿದರು. ಅದೇ ರೀತಿ ಬಿ.ಎಸ್. ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ವಾಲ್ಮೀಕಿ ಜಯಂತಿಗೆ ರಜೆ ಘೋಷಿಸಿದರು. ಅದಕ್ಕಾಗಿ ಉಪಕಾರ ಮಾಡಿದವರನ್ನು ಸ್ಮರಿಸಿಕೊಳ್ಳುವುದು ಮನುಷ್ಯತ್ವ ಎಂದರು.

30 ಕೋಟಿ ರೂ ವೆಚ್ಚದಲ್ಲಿ ವಾಲ್ಮೀಕಿ ಭವನ ಕಟ್ಟಿದ್ದೇನೆ. ಗುಡ್ಡದಲ್ಲಿ ಪಿಯು ಕಾಲೇಜು, ಪ್ರೌಢಶಾಲೆಯನ್ನು ಕಟ್ಟಲಾಗಿದೆ. ಗಣಪತಿ ದೇವಸ್ಥಾನದ ಮುಂಭಾಗ 6 ಕೋಟಿ ರೂ ವೆಚ್ಚದಲ್ಲಿ ಪರಿಶಿಷ್ಟ ಪಂಗಡದ ಹೆಣ್ಣುಮಕ್ಕಳ ಶಿಕ್ಷಣಕ್ಕಾಗಿ 4 ಅಂತಸ್ತಿನ ಹಾಸ್ಟೆಲ್ ನಿರ್ಮಾಣ ಮಾಡಲಾಗಿದೆ. ಅಧಿಕಾರವಿದ್ದಾಗ 10 ಜನಕ್ಕೆ ಒಳ್ಳೆದು ಮಾಡಬೇಕು ಮತ್ತಿ ತಿಮ್ಮಣ್ಣನಾಯಕನ ಕೋಟೆ ಕಟ್ಟಿದವರು ಭೋವಿಗಳು ಆಗ ಜೆಸಿಬಿ ಮತ್ತು ಹಿಟಾಚಿ ಯಾವುದು ಇರಲಿಲ್ಲ. ಚಿತ್ರದುರ್ಗದಲ್ಲಿ ಭದ್ರವಾದ ಕೋಟೆ ಕಟ್ಟಿ ಮದಕರಿನಾಯಕನಿಗೆ ರಕ್ಷಣೆ ನೀಡಿದ್ದು ಭೋವಿ ಜನಾಂಗ ಎನ್ನುವುದನ್ನು ಮರೆಯಬಾರದೆಂದು ನೆನಪಿಸಿದರು.

ಮುಂದಿನ ವರ್ಷದಿಂದ ವಾಲ್ಮೀಕಿ ಜಯಂತಿ ನಾಲ್ಕು ಗೋಡೆ ಮಧ್ಯದಲ್ಲಿ ನಡೆಯಬಾರದು. ಅದ್ದೂರಿಯಾಗಿ ಆಚರಣೆ ಮಾಡಬೇಕಾಗಿರುವುರಿಂದ ಪಕ್ಷಾತೀತವಾಗಿ ಎಲ್ಲಾ ಮುಖಂಡರುಗಳು ಒಟ್ಟಾಗಿ ಸೇರಿ ದೊಡ್ಡ ಪ್ರಮಾಣದಲ್ಲಿ ಆಚರಿಸುವಂತೆ ಹೇಳಿದರು.

ತಹಶೀಲ್ದಾರ್ ಶ್ರೀಮತಿ ಬೀಬಿ ಫಾತೀಮಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್, ಪುರಸಭೆ ಮುಖ್ಯಾಧಿಕಾರಿ ಎ.ವಾಸೀಂ ನಾಯಕ ಸಮಾಜದ ತಾಲ್ಲೂಕು ಅಧ್ಯಕ್ಷ ಸುರೇಗೌಡ್ರು, ಲೋಹಿತ್‌ಕುಮಾರ್, ಶಿವಕುಮಾರ್, ಬಸವರಾಜ್, ಅಜ್ಜಯ್ಯ, ರಾಮಣ್ಣ, ಗೌರಿರಾಜಕುಮಾರ, ಶಿವಕುಮಾರ್, ರಾಜಣ್ಣ, ಮಂಜುನಾಥ, ಹನುಮಂತಪ್ಪ, ವಿವಿಧ ಇಲಾಖೆ ಅಧಿಕಾರಿಗಳು ವಾಲ್ಮೀಕಿ ಜಯಂತಿಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ವಿದ್ಯಾರ್ಥಿಗಳು ಪಾಠದ ಜೊತೆಗೆ ಕ್ರೀಡೆಗೂ ಒತ್ತು ಕೊಡಬೇಕು: ಸ್ವಾಮೀಜಿ



» ಹೊಸದುರ್ಗ

ವಿದ್ಯಾರ್ಥಿಗಳು ಇಂದು ಓದಿನ ಜೊತೆ ಜೊತೆಗೆ ಕ್ರೀಡಾ ಮನೋಭಾವನೆಯನ್ನೂ ರೂಡಿಸಿಕೊಳ್ಳಬೇಕು ಕ್ರೀಡೆಯಿಂದ ದೇಹಕ್ಕೆ ವ್ಯಾಯಾಮ ಸಿಗುತ್ತದೆ ಹಾಗೂ ಮನಸ್ಸಿಗೆ ಉಲ್ಲಾಸ ಸಿಗುವುದರ ಜೊತೆಗೆ ಬುದ್ದಿಮಟ್ಟ ಚುರುಕಾಗುತ್ತದೆ ಎಂದು ಬ್ರಹ್ಮವಿದ್ಯೆನಗರ ಭಗೀರಥ ಪೀಠದ ಶ್ರೀ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಕರೆ ನೀಡಿದರು ತಾಲೂಕಿನ ಕೊಂಡಾಪುರದಲ್ಲಿ ಶುಕ್ರವಾರ ಆಯೋಜನೆ ಮಾಡಿದ್ದ ಭಗೀರಥ ಕ್ರಿಕೇಟ್ ಟೂರ್ನಮಂಟ್ ಉದ್ಘಾಟನೆ ಮಾಡಿ ಮಾತನಾಡಿದರು. ಯುವಕರು ಹಾಗು ವಿದ್ಯಾರ್ಥಿಗಳು ಪಾಠದ ಜೋತೆಗೆ ಕ್ರೀಡೆಗೂ ಒತ್ತು ಕೊಡಬೇಕು, ಎಂದು ತಿಳಿಸಿದ ಅವರು ಕ್ರೀಡೆಗೆ ಸರ್ಕಾರ ಹೆಚ್ಚು ಒತ್ತು ಕೊಡುತ್ತಿದ್ದೆ, ಅದನ್ನು ಸದುಪಯೋಗಪಡಿಸಿಕೊಳ್ಳ ಬೇಕು ಎಂದು ಕರೆ ನೀಡಿದರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಸಮಾಜ ಸೇವಕ ದಿಲ್ಲೆ ದಿಲೀಪ್ ಮಾತನಾಡಿ ವಿಧ್ಯಾರ್ಥಿಗಳು ಕೇವಲ ಪುಸ್ತಕದ ಹುಳುವಾಗದೆ ಓದಿನ ಜೋತೆಗೆ ಕ್ರೀಡಾ ಮನೋಭಾವನೆಯನ್ನೂ ಬೆಳಸಿಕೋಳ್ಳಿ, ಏಕಲವ್ಯನಂತೆ ಸತತ ಅಭ್ಯಾಸದಿಂದ ಚೆನ್ನಾಗಿ ಓದಿ ಶಾಲೆಗೆ ಹಾಗೂ ನಮ್ಮ ನಾಡಿಗೆ ಹೆಸರು ತನ್ನಿ ಎಂದು ವಿಧ್ಯಾರ್ಥಿಗಳಿಗೆ ಕರೆ ನೀಡಿದರು. ಈ ಸಂಧರ್ಬದಲ್ಲಿ ಹಳ್ಳದಮನೆ ಮಂಜುನಾಥ್, ಮಠದಶಿವು,ಬಿಜೆಪಿ ಜಿಲ್ಲಾ ಕಾರ್ಯಧರ್ಶಿಸಿಂಧು, ಹೆಬ್ಬಳ್ಳಿ ಪಂಚಾಯಿತಿ ಅಧ್ಯಕ್ಷೆ ಬಾಗ್ಯಮ್ಮ, ಸದಸ್ಯರುಗಳಾದ ಸಂತೋಷ್, ವಿನಯ್ ಗ್ರಾಮದ ಮುಖಂಡ ಕಟ್ಟೆರಂಗಪ್ಪ ಮುಂತಾದವರು ಉಪಸ್ಥಿತರಿದ್ದರು.

### ಪತ್ರಿಕಾ ಗೋಷ್ಟಿಯಲ್ಲಿ ಲಂಚಾವತಾರ ಬಿಚ್ಚಿಟ್ಟ ಶಾಸಕ ಬಿ.ಜಿ.ಗೋವಿಂದಪ್ಪ

» ಮೊದಲ ಪುಟದಿಂದ

ಇದಕ್ಕೆ ಶೀಘ್ರದಲ್ಲಿಯೇ ಉತ್ತರ ಕಂಡು ಕೊಳ್ಳುವುದಾಗಿ ತಿಳಿಸಿದ ಅವರು ತಾಲೂಕು ಕಛೇರಿಯಲ್ಲಿ ಬ್ರಷ್ಠಾಚಾರ ತಾಂಡವವಾಡುತ್ತಿದೆ ಈಗ ಹೊಸದಾಗಿ ತಿರುಪತಿ ಪಾಟೀಲ್ ಎಂಬುವವರು ತಹಶಿಲಾರ್ ಆಗಿ ಬಂದಿದ್ದಾರೆ. ಶೀಘ್ರದಲ್ಲಿಯೇ ಕಂದಾಯ, ಸಬ್ ರಿಜಿಸ್ಟಾರ್ ಕಛೇರಿ ಇಲಾಕೆಯ ಅಧಿಕಾರಿಗಳ ಸಭೆ ನಡೆಸಿ ಬ್ರಷ್ಠಾಚಾರಕ್ಕೆ ಕಡಿವಾಣ ಹಾಕಲಾಗುವುದು ಎಂದರು.

ಪಟ್ಟಣದ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಸೆ. 30 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನತಾ ದರ್ಶನ ಕಾರ್ಯಕ್ರಮ ಏರ್ಪಾಡು ಮಾಡಲಾಗಿದ್ದು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಶಾಸಕ ಬಿಜಿ ಗೋವಿಂದಪ್ಪ ಕರೆ ನೀಡಿದರು.

ತಮಗೆ ಬಹುಮತದ ಸರ್ಕಾರ ರಚಿಸಲು ಅವಕಾಶ ನೀಡಿದ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಂಡು ಕೊಳ್ಳುವ ನಿಟ್ಟಿನಲ್ಲಿ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರು ಜಿಲ್ಲಾಧಿಕಾರಿಗಳ ಸಭೆ ನಡೆಸಿ ಪ್ರತಿ 15 ದಿನಕ್ಕೊಮ್ಮೆ ತಾಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ನಡಸುವಂತೆ ಸೂಚನೆ ನೀಡಿದ್ದು ಈನಿಟ್ಟಿನಲ್ಲಿ ಸೆ. 30ರ ಸೋಮವಾರ ಹೊಸದುರ್ಗದಲ್ಲಿ ಆಯೋಜಿಸಲಾಗಿದೆ ಎಂದರು.

ಜನತಾ ದರ್ಶನದಲ್ಲಿ ಅರ್ಜಿಗಳನ್ನು ಕೇವಲ ಲಿಖಿತ ರೂಪದಲ್ಲಿ ತೆಗೆದುಕೊಳ್ಳದೆ ಇ ಆಫೀಸ್ ತಂತ್ರಾಂಶದಲ್ಲಿ ನೊಂದಣಿ ಮಾಡಿಕೊಳ್ಳುವ ಮೂಲಕ ಅರ್ಜಿಗಳಿಗೆ ಸ್ಥಳದಲ್ಲಿಯೇ ಉತ್ತರ ನೀಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಅಲ್ಲದೆ ತಾಲೂಕು ಕಛೇರಿಯಲ್ಲಿಯೂ ಸೋಮವಾರ ಇ ಆಫೀಸ್ ವ್ಯವಸ್ಥೆಯನ್ನು ಉದ್ಘಾಟಿಸಲಾಗುವುದು ಇನ್ನು ಮುಂದೆ ಸಾರ್ವಜನಿಕರು ನೀಡುವ ಯಾವುದೇ ಅಹವಾಲುಗಳನ್ನು ಇ ಆಫೀಸ್ ತಂತ್ರಾಂಶದಲ್ಲಿ ದಾಖಲು ಮಾಡುವ ಮೂಲಕ ನಿಗದಿತ ಸಮಯದೊಳಗೆ ಸಮಸ್ಯೆಗಳಿಗೆ ಪರಿಹಾರ ನೀಡಲಾಗುವುದು ಎಂದರು. ತಾಲೂಕು ಮಟ್ಟದ ಜನತಾ ದರ್ಶನ ರಾಜ್ಯ ಸರ್ಕಾರ ಸೂಚಿಸಿದ ಕಾರ್ಯಕ್ರಮವಾಗಿದೆಆದರೆನವಂಬರ್ತಿಂಗಳಿಂದ ಪ್ರತಿ ಮಂಗಳವಾರ ನಾವು ತಾಲೂಕು ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಗಳ ಜೊತೆಯಲ್ಲಿ ಗ್ರಾಪಂ ಕೇಂದ್ರ ಸ್ಥಾನದಲ್ಲಿ ಜನತಾ ದರ್ಶನ ಕಾರ್ಯಕ್ರಮ ನಡೆಸುವುದಾಗಿ ತಿಳಿಸಿದರು.

### ಯುವತಿ ನಾಪತ್ತೆ

■ ಚಳ್ಳಕೆರೆ

ಚಳ್ಳಕೆರೆ ನಗರದ ವಿಠಲ ನಗರದ ನಿವಾಸಿ ಚೌಡಮ್ಮ ಎಂಬುವವರು ಪೊಲೀಸ ಠಾಣೆಗೆ ದೂರು ನೀಡಿ, ನನ್ನ ಮಗಳು ಅರುಣ(22) ಅ.27ರಂದು ನನ್ನ ತಂಗಿ ನಿಂಗಮ್ಮರ ಮನೆಯಿಂದ ಗಾಂಧಿನಗರಕ್ಕೆ ಹೋಗಿ ಬರುವುದಾಗಿ ತಿಳಿಸಿ ಹೋದವರು ವಾಪಾಸ್ ಬಂದಿರುವುದಿಲ್ಲ. ಪರಿಚಯವಿರುವ ಕೀರ್ತಿ ಎಂಬುವವರ ಜೊತೆಯಲ್ಲಿ ಹೋಗಿರಬಹುದು ಎಂಬ ಅನುಮಾನವಿದ್ದು ಮಗಳು ಅರುಣ ನಾಪತ್ತೆಯಾಗಿದ್ದು, ಪತ್ತೆ ಮಾಡಿಕೊಂಡುವಂತೆ ದೂರು ನೀಡಲಾಗಿದೆ.

# ಸ್ವಚ್ಚತಾ ಅಂದೋಲನ ದೇಶದ ಪ್ರಗತಿಗೆ ಪ್ರೇರಕ

» ಚಳ್ಳಕೆರೆ

ದೇಶಕ್ಕೆ ಸ್ವಚ್ಚತೆಯ ಸ್ಪರ್ಶ ನೀಡಿದವರು ಮಹಾತ್ಮಗಾಂಧೀಜಿಯವರು. ಗ್ರಾಮೀಣ ಭಾಗದ ಸರ್ವತೋಮುಖ ಅಭಿವೃದ್ದಿಗಾಗಿ ಹಲವಾರು ಯೋಜನೆ ರೂಪಿಸಿದ ಅವರು, ಸ್ವಚ್ಚತೆಯಿಂದ ಮಾತ್ರ ಬದಲಾವಣೆ ಸಾಧ್ಯ ಎಂಬುವುದನ್ನು ಪ್ರತಿಪಾದಿಸಿದರು ಎಂದು ಖ್ಯಾತ ಸಾಹಿತಿ, ಬರಹಗಾರ, ವಿಮರ್ಶಕ ಬಿ.ತಿಪ್ಪಣ್ಣ ಮರಿಕುಂಟೆ ತಿಳಿಸಿದರು.

ಅವರು, ತಾಲ್ಲೂಕಿನ ಡಿ.ಉಪ್ಪಾರಹಟ್ಟಿ ಗ್ರಾಮದಲ್ಲಿ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಶಿಬಿರದ ಮೂರನೇ ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು. ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಗ್ರಾಮಕ್ಕೆ ಆಗಮಿಸಿ ಈ ಆಂದೋಲನದಲ್ಲಿ ಭಾಗವಹಿಸುವರು ಮೂಲಕ ಗ್ರಾಮೀಣ ಭಾಗದ ಜನರಲ್ಲೂ ಸಹ ಹೊಸ ಆತ್ಮವಿಶ್ವಾಸ ಹುಟ್ಟುಹಾಕಿದ್ಧಾರೆ.



ಎನ್‌ಎಸ್‌ಎಸ್ ಶಿಬಿರಗಳು ಯಾವುದೇ ಗ್ರಾಮಾಂತರ ಪ್ರದೇಶದಲ್ಲಿ ನಡೆದರೂ ಅದರ ಸದುಪಯೋಗವನ್ನು ಗ್ರಾಮಸ್ಥರು ಹೆಚ್ಚು ಪಡೆಯುತ್ತಾರೆಂಬುವುದರಲ್ಲಿ ಸಂಶಯವಿಲ್ಲವೆಂದರು. ಇಂತಹ ಶಿಬಿರಗಳು ಇನ್ನೂ ಹೆಚ್ಚು, ಹೆಚ್ಚು ನಡೆಯಲಿ ಎಂದು ಆಶಿಸುವುದಾಗಿ ತಿಳಿಸಿದರು.

ಸಮುದಾಯದ ಮುಖಂಡ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಅಜ್ಜಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕೈಯಲ್ಲಿ ಸದಾ ಪುಸ್ತಕ, ಪೆನ್ನು ಹಿಡಿದು ಜ್ಞಾನಾರ್ಜನೆಗಾಗಿ ಕಾಲೇಜಿಗೆ ಆಗಮಿಸುವ ವಿದ್ಯಾರ್ಥಿಗಳು ಇಂದು ಕೈಯಲ್ಲಿ ಪೊರಕೆ ಹಿಡಿದು ಸ್ವಚ್ಚತಾ ಜಾಗೃತಿಯನ್ನು ಮೂಡಿಸುತ್ತಿರುವುದು ಸಂತಸ ತಂದಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಎನ್‌ಎಸ್‌ಎಸ್ ಶಿಬಿರ ಹಲವಾರು ರೀತಿಯಲ್ಲಿ ಗ್ರಾಮೀಣ ಭಾಗದ ಜನರಿಗೆ ಸದುಪಯೋಗವಾಗುತ್ತಿದೆ. ಗ್ರಾಮೀಣ ಭಾಗದ ಜನರಲ್ಲಿ ಆರೋಗ್ಯದ ಬಗ್ಗೆ ಅರಿವು ಮೂಡಿಸಲು ಇಂತಹ ಸ್ವಚ್ಚತಾ ಕಾರ್ಯಕ್ರಮಗಳು ಆಯೋಜಿಸಲಾಗುತ್ತಿದೆ. ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಸ್ವಚ್ಚತೆ ಅಂದೋಲನದ ಮೂಲಕ ಜನರಲ್ಲಿ ಹೊಸ ಆತ್ಮವಿಶ್ವಾಸ ಹುಟ್ಟುಹಾಕುವ ಪ್ರಯತ್ನದಲ್ಲಿದ್ದಾರೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಜಿ.ಎನ್. ವೆಂಕಟೇಶ್, ಗ್ರಾಮ ಪಂಚಾಯಿತಿ ಸದಸ್ಯ ಎಸ್.ಶಿವಣ್ಣ, ಗುಂಡಣ್ಣ, ಸಿರಿಗೊಂಡಪ್ಪ, ಮಾಜಿ ಅಧ್ಯಕ್ಷ ಜಿ.ಕೆ.ವೀರಣ್ಣ, ಉಪನ್ಯಾಸಕರಾದ ಕರಡಪ್ಪ, ವೀರೇಶ್, ಮಧು ಉಪಸ್ಥಿತರಿದ್ದರು.

# ಶ್ರೀರಾಮನನ್ನು ನೆನೆಯುವ ಮುನ್ನ ವಾಲ್ಮೀಕಿ ನೆನೆಯಿರಿ: ಶಾಸಕ ಬಿ.ಜಿ.ಗೋವಿಂದಪ್ಪ

» ಹೊಸದುರ್ಗ

ಲೋಕಕ್ಕೆ ಶ್ರೀರಾಮ ಚಂದ್ರನನ್ನು ಪರಿಚಯಿಸಿದ್ದು, ಮಹರ್ಷಿ ವಾಲ್ಮೀಕಿ ಮುನಿಗಳು. ಶ್ರೀ ರಾಮನನ್ನು ನೆನೆಯುವ ಮುನ್ನ ವಾಲ್ಮೀಕಿಯವರನ್ನು ಧ್ಯಾನ ಮಾಡಬೇಕು. ನಂತರ ಶ್ರೀರಾಮನನ್ನು ಧ್ಯಾನಿಸಬೇಕು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಪಟ್ಟಣದ ಅಶೋಕ ರಂಗಮಂದಿರದಲ್ಲಿ ಶನಿವಾರ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಾಲ್ಮೀಕಿ ಮಹರ್ಷಿ ಇಲ್ಲದೇ ಹೋಗಿದ್ದರೆ ಶ್ರೀರಾಮನ ಹೆಸರು ಈ ಭೂಮಿ ಮೇಲೆ ಇರುತ್ತಿರಲಿಲ್ಲ. ಶ್ರೀರಾಮ ಯಾರು ಎಂದು ಪ್ರಶ್ನೆ ಮಾಡಬೇಕಾಗಿತ್ತು. ಇಂತಹ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿಯವರು ರಾಮಾಯಣ ರಚಿಸಿ ಈ ದೇಶಕ್ಕೆ ದಾರ್ಶನಿಕರಾಗಿದ್ದಾರೆ. ಈ ಮೂಲಕ ದೈವತ್ವ, ಸಮಾನತೆ ಸೇರಿ ಹಲವಾರು ವಿಷಯಗಳನ್ನು ಒಳಗೊಂಡಂತೆ ಮಹಾನ್ ಗ್ರಂಥ ರಚಿಸಿ ನಮಗೆ ಬಿಟ್ಟು ಹೋಗಿದ್ದಾರೆ. ಅದನ್ನು ಪೂಜ್ಯ ಭಾವನೆಯಿಂದ ಉಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಆಗಿದೆ ಎಂದು ತಿಳಿಸಿದರು.

ಶ್ರೀರಾಮ ಮಂದಿರ ಕಟ್ಟಿಸಲು ಕೇಂದ್ರ ಸರ್ಕಾರ ಸಂಪೂರ್ಣವಾಗಿ ಬೆಂಬಲ ವ್ಯಕ್ತಪಡಿಸಿದ್ದಾರೆ. ಆದರೆ ಶ್ರೀರಾಮನ ಹೆಸರು ಉಳಿಸಲು ನಿರ್ಧರಿಸಿರುವ ಸರ್ಕಾರ ರಾಮಾಯಣ ರಚಿಸಿದ ವಾಲ್ಮೀಕಿಯವರನ್ನು ಮರೆತಿರುವುದು ಬೇಸರದ



ಸಂಗತಿ. ಹಾಗಾಗಿ ಅಯೋಧ್ಯೆಯಲ್ಲಿ ಶ್ರೀರಾಮನ ಮಂದಿರದ ಪಕ್ಕದಲ್ಲಿ ವಾಲ್ಮೀಕಿಯವರ ಮಂದಿರ ನಿರ್ಮಾಣ ಮಾಡಬೇಕು ಎಂದು ಶಾಸಕರು ಒತ್ತಾಯಿಸಿದರು.

ವಾಲ್ಮೀಕಿ ಸಮಾಜದ ಪ್ರಸನ್ನಾನಂದಪುರಿ ಸ್ವಾಮೀಜಿ ಈ ಸಮಾಜದ ಕಣ್ಮಣಿಯಾಗಿದ್ದು, ಈ ಸಮಾಜಕ್ಕೆ ಸರ್ಕಾರದಿಂದ ಸಿಗುವ ಮೀಸಲಾತಿ ಸೌಲಭ್ಯವನ್ನು ರಾಜನಹಳ್ಳಿಯಿಂದ ಬೆಂಗಳೂರಿಗೆ ಪಾದಯಾತ್ರೆ ಮೂಲಕ ಧರಣಿ ಕೈಗೊಂಡು ಮೀಸಲಾತಿಯನ್ನು ದೊರಕಿಸಿ ಕೊಡಲು ಕೊಟ್ಟಿದ್ದಾರೆ. ಈ ನಿಟ್ಟಿನಲ್ಲಿ ಸಮಸ್ತ ವಾಲ್ಮೀಕಿ ಸಮಾಜ ಸ್ವಾಮೀಜಿಯವರನ್ನು ನೆನೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕ ಕರಿಯಪ್ಪ ಮಾಳಿಗಿ ವಿಶೇಷ ಉಪನ್ಯಾಸ ನೀಡಿದರು. ತಹಸಿಲ್ದಾರ್ ತಿರುಪತಿ ಪಾಟೀಲ್, ತಾ.ಪಂ ಇಒ ಸುನೀಲ್ ಕುಮಾರ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಕಾಳಮ್ಮ, ಸಹಾಯಕ ಕೃಷಿ ನಿರ್ದೇಶಕ ಈಶ, ಕ್ಷೇತ್ರ ಸಂಪನ್ಮೂಲ ಸಮನ್ವಯ ಶಿಕ್ಷಣಾಧಿಕಾರಿ ಶ್ರೀನಿವಾಸ್, ತಾಲೂಕು ನಾಯಕ ಸಮಾಜದ ಅಧ್ಯಕ್ಷ ರಂಗನಾಥ್ ಮತ್ತು ಕಾರ್ಯದರ್ಶಿ ರಂಗನಾಥ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ನಾಯಕ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಸಮಾಜದ ಎಲ್ಲಾ ವರ್ಗಗಳಲ್ಲಿ ಧಾರ್ಮಿಕ ಜಾಗೃತಿ



» ಚಳ್ಳಕೆರೆ

ಮಹರ್ಷಿ ವಾಲ್ಮೀಕಿಯವರು ಇಡೀ ಮಾನವ ಸಮಾಜ ಎಂದೂ ಮರೆಯಲಾರದಂತಹ ಅಮೂಲ್ಯವಾದ ಕೊಡುಗೆಯನ್ನು ನೀಡಿದ್ದಾರೆ. ಅವರ ಚಿಂತನಾ ಶಕ್ತಿಗೆ ಬೆಲೆಕಟ್ಟಲು ಸಾಧ್ಯವಿಲ್ಲ. ವಾಲ್ಮೀಕಿಯವರ ರಾಮಾಯಣ ಸದಾ ಆದರ್ಶ ಎಂದು ಗ್ರಾಮ ಪಂಚಾಯಿತಿ ಸದಸ್ಯ ರುದ್ರೇಶ್ ತಿಳಿಸಿದರು. ಪರಶುರಾಮಪುರ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿಯವರ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು. ಇಂದು ಗ್ರಾಮೀಣ ಭಾಗಗಳಲ್ಲಿ ಎಲ್ಲಾ ವರ್ಗದ ಜನರಿಗೆ ಸುಲಭವಾಗಿ ಅರ್ಥವಾಗುವ ಏಕೈಕ ಕೃತಿ ವಾಲ್ಮೀಕಿಯವರು ರಚಿಸಿದ ರಾಮಾಯಣ ಎಂದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ನಾಗಭೂಷಣ್, ಪ್ರಸನ್ನ, ಪ್ರಕಾಶ್, ಸಿದ್ದೇಶ್ವರ ರಾಮಣ್ಣ, ಬೊಮ್ಮಕ್ಕ, ಗೀತಮ್ಮ, ಸಿದ್ದೇಶ್, ಪಿಡಿಒ ಗುಂಡಪ್ಪ, ಕಾರ್ಯದರ್ಶಿ ವೆಂಕಟೇಶ್, ಭೀಮರಾಜು ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಡಿ.ಉಪ್ಪಾರಹಟ್ಟಿ ಎನ್‌ಎಸ್‌ಎಸ್ ಶಿಬಿರ




ಚಳ್ಳಕೆರೆ: ಗ್ರಾಮೀಣ ಭಾಗಗಳಲ್ಲಿ ಜನರಿಗೆ ಪರಿಸರ ಸಂರಕ್ಷಣೆಯ ಬಗ್ಗೆ ಸೂಕ್ತ ಮಾಹಿತಿ, ಮಾರ್ಗದರ್ಶನ ಇರುವುದಿಲ್ಲ. ಹೀಗಾಗಿ ಪರಿಸರವನ್ನು ಕಾಪಾಡಲು ಅವರಿಗೆ ಸಾಧ್ಯವಾಗದು. ಆದ್ದರಿಂದ ರಾಷ್ಟ್ರೀಯ ಸೇವಾ ಯೋಜನಾ ಶಿಬಿರದ ಮೂಲಕ ಗ್ರಾಮಸ್ಥರಿಗೆ ಪರಿಸರ ಸಂರಕ್ಷಣೆಯ ಜೊತೆಗೆ ಪರಿಸರದಿಂದ ಆಗುವ ಲಾಭದ ಬಗ್ಗೆ ಜಾಗೃತಿ ಮೂಡಿಸಲಾಯಿತು ಎಂದು ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಬಿ.ಶಾಂತಕುಮಾರಿ ತಿಳಿಸಿದರು. ಅವರು, ಪತ್ರಿಕೆಗೆ ಮಾಹಿತಿ ನೀಡಿ ತಾಲ್ಲೂಕಿನ ಡಿ.ಉಪ್ಪಾರಹಟ್ಟಿ ಗ್ರಾಮದಲ್ಲಿ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ ಘಟಕ ಕಳೆದ ಐದು ದಿನಗಳಿಂದ ಶಿಬಿರವನ್ನು ನಡೆಸುತ್ತಿದ್ದು, ಗ್ರಾಮದ ವಿವಿಧ ರಸ್ತೆಗಳಲ್ಲಿ ಸಸ್ಯ ಶ್ಯಾಮಲ ಹಸಿರೇ ಉಸಿರು ಕಾರ್ಯಕ್ರಮದಡಿ ಸುಮಾರು 100ಕ್ಕೂ ಹೆಚ್ಚು ಗಿಡಗಳನ್ನು ನೆಡುವ ಮೂಲಕ ಜನರಿಗೆ ಜಾಗೃತಿ ಮೂಡಿಸಲಾಯಿತು.

# ರಾಜ್ಯೋತ್ಸವ ಅದ್ದೂರಿಯಾಗಿ ಆಚರಿಸಲು ಸಿದ್ದರಾಗಿ

» ಹೊಳಲ್ಕೆರೆ

ಈ ಬಾರಿಯ ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ಎಲ್ಲಾ ಇಲಾಖೆಯ ಆಧಿಕಾರಿಗಳು ಸಿದ್ದತೆ ಮಾಡಿಕೊಳ್ಳಬೇಕೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕು ಕಚೇರಿ ಸಬಾಂಗಣದಲ್ಲಿ 50ನೇ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಶನಿವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಶಾಸಕರು ಡಿ.ದೇವರಾಜ ಅರಸು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಕರ್ನಾಟಕ ಎಂದು ನಾಮಕರಣ ಮಾಡಿ 50 ವರ್ಷಗಳಾಗಿರುವುದರಿಂದ ನವಂಬರ್ 1 ರಂದು ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ.



3 ರಿಂದ 4 ಸಾವಿರ ಮಹಿಳೆಯರು ಕನ್ನಡ ರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಬೇಕು.

ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಯಲ್ಲಿ ಕನ್ನಡದಲ್ಲಿ ಶೇ 100ಕ್ಕೆ 100ರಷ್ಟು ಅಂಕಗಳನ್ನು ಪಡೆದಿರುವ ಸನ್ಮಾನಿಸಲಾಗುವುದು. ಇದೇ ಸಂದರ್ಭದಲ್ಲಿ ಹಿರಿಯ ಸಾಹಿತಿಗಳನ್ನು ಗೌರವಿಸಲಾಗುವುದು.

5 ಕನ್ನಡ ಗೀತೆಗಳನ್ನು ಹಾಡಬೇಕೆಂದು ರಾಜ್ಯ ಸರ್ಕಾರ ಸೂಚಿಸಿದೆ. ಕನ್ನಡ ರಾಜ್ಯೋತ್ಸವದಲ್ಲಿ ಸಿಹಿ ಹಂಚಿ ಸಂಭ್ರಮಿಸಬೇಕಿದೆ. ಸಂವಿಧಾನ ಸೌಧದಲ್ಲಿ ನಡೆಯುವ ಕನ್ನಡ ರಾಜ್ಯೋತ್ಸವದಲ್ಲಿ ಎಲ್ಲಾ ರೀತಿಯ ಸಹಕಾರ ಕೊಡುವುದಾಗಿ ತಿಳಿಸಿದರು.

ತಹಶೀಲ್ದಾರ್ ಶ್ರೀಮತಿ ಬೀಬಿ ಫಾತೀಮಾ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್, ಪುರಸಭೆ ಮುಖ್ಯಾಧಿಕಾರಿ ಎ.ವಾಸೀಮ್, ಶಿವಮೂರ್ತಿ, ಹನುಮಂತಪ್ಪ, ವಿಜಯಕುಮಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

### ಪ್ರಸನ್ನಾನಂದಸ್ವಾಮೀಜಿಅವರ ಹೋರಾಟದ ಫಲವಾಗಿ

# ಎಸ್‌ಟಿ ಸಮಾಜಕ್ಕೆ ಮಿಸಲಾತಿ ಹೆಚ್ಚಳ ಮಾಡಲಾಯಿತು

» ಹೊಸದುರ್ಗ

ಪ್ರಸನ್ನಾನಂದಸ್ವಾಮೀಜಿಅವರ ಹೋರಾಟದ ಫಲವಾಗಿ ಎಸ್‌ಟಿ ಸಮಾಜಕ್ಕೆ ಮಿಸಲಾತಿ ಹೆಚ್ಚಳ ಮಾಡಲಾಯಿತು.ಅವರು ಪೀಠಾಧ್ಯಕ್ಷರಾದನಂತರ ಸಮಾಜವನ್ನು ಒಗ್ಗೂಡಿಸಿ ಸಂಘಟಿಸಿದ್ದಾರೆ.ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಾಕಷ್ಟು ಅನುದಾನ ನೀಡಿ ಸಮಾಜ, ಮಠದ ಬೆಳವಣಿಗೆ ಸಹಕಾರ ನೀಡಿದ್ದಾರೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಪಟ್ಟಣದ ಅಶೋಕ ರಂಗಮಂದಿರದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಸಮಾಜಕಲ್ಯಾಣ ಇಲಾಖೆ, ಪುರಸಭೆ, ಪೊಲೀಸ್ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಶನಿವಾರಆಯೋಜಿಸಲಾಗಿದ್ದ ಶ್ರೀ ಮಹರ್ಷಿ ವಾಲ್ಮೀಕಿಜಯಂತಿ ಮಹೋತ್ಸವ ಉದ್ಘಾಟಿಸಿ ಮಾತನಾಡಿದರು.

ಅಂಬೇಡ್ಕರ್‌ಹಾಗೂಮದಕರಿನಾಯಕರ ಪುತ್ಥಳಿ ನಿರ್ಮಾಣ ಮಾಡುವ ಮೂಲಕ



ಸಮಾಜದ ಬೇಡಿಕೆಯನ್ನುಈಡೇರಿಸುವೆ ಹಿಂದಿನ ಸರಕಾರದಅವಧಿಯಲ್ಲಿ ಕಳೆದ ವರ್ಷಗಂಗಾಕಲ್ಯಾಣಯೋಜನ 'ಯಡಿಕೊರೆಸಲಾಗಿದ್ದ ಕೊಳವೆಬಾವಿಗಳಿಗೆ ಬೇಕಾಗಿರುವಪಂಪ್, ಮೋಟಾರ್, ವಿದ್ಯುತ್ ಚಕ್ತಿ ಒದಗಿಸಲು ಸರಕಾರಒಪ್ಪಿಗೆ ನೀಡಿದೆ.ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡಿದ್ದರೈತರಿಗೆ ಭೂಮಿ ಮಂಜೂರು ಮಾಡಿ ಪಹಣಿ, ಪಟ್ಟೆಒದಗಿಸುವೆ. ಈ ಹಿಂದೆ ನನ್ನಅವಧಿಯಲ್ಲಿ 600 ಜನಕ್ಕೆಪಹಣಿ, ಪಟ್ಟೆ ನೀಡಿದ್ದೆಎಂದರು.ಗ್ರಾಮಾಂತರಪ್ರದೇಶದಲ್ಲಿ ವಸತಿ ಮನೆಗಳಿಗೆ ಬೇಡಿಕೆಯಿದೆ.ಮುಂದಿನ ವರ್ಷದ ಬಜೆಟ್‌ನಲ್ಲಿರಾಜ್ಯ ಸರಕಾರ ಹೊಸ ಮನೆಗಳ ನಿರ್ಮಾಣಕ್ಕೆಒಪ್ಪಿಗೆ ನೀಡಲಿದೆ. ಆಗ ವಸತಿರಹಿತರಿಗೆ ಮನೆ ಮಂಜೂರು ಮಾಡುತ್ತೇನೆ. ಅರ್ಧಕೆ ನಿಂತ ಮನೆಗಳ ನಿರ್ಮಾಣಕ್ಕೆಸರಕಾರ ಹಣ ಬಿಡುಗಡೆ ಮಾಡಿದೆಎಂದರು.ಸರಕಾರ ವಿವಿದ ಸೌಲಭ್ಯಗಳಿಗೆಅರ್ಜಿಆಹ್ವಾನಿಸಲಿದೆ.ಸೌಲಭ್ಯ ಬೇಕಾದವರುಅರ್ಜಿ ಸಲ್ಲಿಸಿ ಪ್ರಯೋಜನ ಪಡೆಯಬಹುದು.ಇಲ್ಲಿಯಾವುದೇ ಮದ್ಯವರ್ತಿಗಳ ಅವಶ್ಯಕತೆಇಲ್ಲ. ಬಗರ್‌ಹುಕುಂ ಸಮಿತಿ ರಚಿಸಿ ಆರ್ಹರಿಗೆ ಸಾಗುವಳಿ ಚೀಟಿ ವಿತರಿಸುವೆಎಂದರು.

ಪ್ರೊಫೆಸರ್‌ಕರಿಯಪ್ಪ ಮಾಳಿಗೆ ಅವರು ಮಹರ್ಷಿ ವಾಲ್ಮೀಕಿಕುರಿತು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ತಹಸೀಲ್ದಾರ್ ತಿರುಪತಿ ಪಟೇಲ್, ತಾಪಂ ಇಒ ಸುನಿಲ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸಿ.ಎಸ್. ಈಶ, ಬಿ.ಆರ್.ಸಿ ಶ್ರೀನಿವಾಸ್, ಅಕ್ಷರದಸೋಹದ ಸಹಾಯಕ ನಿರ್ದೇಶಕ ಪರಮೇಶ್ವರಪ್ಪ ಸಮಾಜಕಲ್ಯಾಣಾಧಿಕಾರಿ ಕಾಳಮ್ಮ, ತಾಲೂಕು ನಾಯಕ ಸಮಾಜದ ಅಧ್ಯಕ್ಷ ಕೆ.ಟಿ.ರಂಗನಾಥ್, ವಾಲ್ಮೀಕಿ ಯುವ ಇಲಾಖೆಯ ಅಧಿಕಾರಿಗಳಾದ ಧನಂಜಯ, ಪ್ರಕಾಶ್, ಪರಮೇಶ್ವರಪ್ಪ ಮತ್ತಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T